# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 57 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 13–09–2024 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 02 Issue - 57 | RNI No: KARKAN/2023/88462 | Chitradurga | Date: 13-09-2024 Friday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಪ್ರಜಾಪ್ರಭುತ್ವದ ಸ್ಪೂರ್ತಿ ಎತ್ತಿಹಿಡಿಯಲು ಎಲ್ಲರೂ ಕೈಜೋಡಿಸಿ: ಡಿಸಿ 2

ತ್ಯಾಜ್ಯ ನೀರು ನಿರ್ವಹಣೆ: ನಿರ್ಲಕ್ಷ್ಯ ತೋರುವ ಅಧಿಕಾರಿಗಳ ವಿರುದ್ಧ ಎಫ್‌ಐಆರ್ 3

ಮಹಿಳೆಯರಿಗೆ ರಕ್ಷಣೆಯಿಲ್ಲ, ಹೆಚ್ಚಿನ ಸುರಕ್ಷತೆ ಅಗತ್ಯ: ಸಂಸದೆ ಡಾ; ಪ್ರಭಾ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ: ಸಾಲ ಸೌಲಭ್ಯಕ್ಕಾಗಿ ಅರ್ಜಿ

» ಚಿತ್ರದುರ್ಗ

ಸಮಾಜ ಕಲ್ಯಾಣ ಇಲಾಖೆ ಅಧೀನದಲ್ಲಿರುವ ನಿಗಮಗಳಾದ ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ, ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮ, ಕರ್ನಾಟಕ ತಾಂಡ ಅಭೀವೃದ್ಧಿ ನಿಗಮ ಹಾಗೂ ಪ.ಜಾತಿ ಅಲೆಮಾರಿ, ಅರೆ ಅಲೆಮಾರಿಗಳ ಅಭಿವೃದ್ಧಿ ನಿಗಮಗಳಿಂದ 2024–25ನೇ ಸಾಲಿನಲ್ಲಿ ವಿವಿಧ ಯೋಜನೆಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಅ.10 ಕೊನೆಯ ದಿನವಾಗಿದೆ. ಪರಿಶಿಷ್ಟ ಜಾತಿ ಸಮುದಾಯಗಳ ಆರ್ಥಿಕ ಅಭಿವೃದ್ಧಿಗಾಗಿ, ಸ್ವಯಂ ಉದ್ಯೋಗ ನೇರ ಸಾಲ ಯೋಜನೆ, ಉದ್ಯಮಶೀಲತಾ ಅಭಿವೃದ್ಧಿ ಯೋಜನೆ–1, ಉದ್ಯಮಶೀಲತಾ ಅಭಿವೃದ್ಧಿ ಯೋಜನೆ–2, ಉದ್ಯಮಶೀಲತಾ ಅಭಿವೃದ್ಧಿ ಸ್ವಾವಲಂಬಿ ಸಾರಥಿ ಯೋಜನೆ, ಸ್ವಯಂ ಉದ್ಯೋಗ ನೇರ ಸಾಲ ಯೋಜನೆ, ಮೈಕ್ರೋ ಕ್ರೆಡಿಟ್ (ಪ್ರೇರಣಾ) ಯೋಜನೆ, ಭೂ ಒಡೆತನ ಯೋಜನೆ ಹಾಗೂ ಗಂಗಾ ಕಲ್ಯಾಣ ಯೋಜನೆಗಳಿಗೆ ಅರ್ಜಿ ಸಲ್ಲಿಸಬಹುದು. ಈ ಯೋಜನೆಗಳ ಕುರಿತಾಗಿ ಸವಿವರವಾದ ಮಾಹಿತಿಯನ್ನು ಸಮಾಜ ಕಲ್ಯಾಣ ಇಲಾಖೆಯ ಸಾಲ ಸೇವೆಗಳ ಪೋರ್ಟಲ್ ವೆಬ್‌ಸೈಟ್ https://swdcorp.karnataka.gov.in ಗೆ ಭೇಟಿ ನೀಡಿ ಮಾಹಿತಿ ಪಡೆಯಬಹುದು. ಆಸಕರು https://sevasindhu.karnataka.gov.in ತಂತ್ರಾಂಶದ ಮೂಲಕ ಕರ್ನಾಟಕ ಒನ್, ಗ್ರಾಮ ಒನ್, ಬೆಂಗಳೂರು ಒನ್ ಕೇಂದ್ರಗಳಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. 2023–24ನೇ ಸಾಲಿನಲ್ಲಿ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಿರುವವರು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಚೇರಿ ದೂರವಾಣಿ ಸಂಖ್ಯೆ 08194–200214 ಅಥವಾ ಆಯಾ ತಾಲ್ಲೂಕಿನ ಅಭಿವೃದ್ಧಿ ಅಧಿಕಾರಿಗಳನ್ನು ಸಂಪರ್ಕಿಸಬಹುದು ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ.

### ಹೆಚ್.ಎ.ಎಲ್ ಅಪ್ರೆಂಟಿಸ್ ತರಬೇತಿಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಹೆಚ್.ಎ.ಎಲ್ (ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್) ನಲ್ಲಿ ವಿವಿಧ ಟ್ರೇಡ್‌ಗಳ ಅಪ್ರೆಂಟಿಶಿಪ್ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಫಿಟ್ಟರ್, ಮಷಿನಿಷ್ಟ್,ಟರ್ನರ್, ಎಲೆಕ್ಟ್ರಿಷಿಯನ್, ವೆಲ್ಡರ್,ಕಂಪ್ಯೂಟರ್ ಆಪರೇಟರ್ ಅಂಡ್ ಪ್ರೋಗ್ರಾಮ್ ಅಸಿಸ್ಟಂಟ್, ಕಾರ್ಪೆಂಟರ್, ಫೌಂಡ್ರಿ–ಮ್ಯಾನ್, ಶೀಟ್ ಮೆಟಲ್ ವರ್ಕರ್, ಟೂಲ್ ಮತ್ತು ಡೈ ಮಾರ್ಕರ್, ಸಿ.ಎನ್.ಜಿ. ಪ್ರೋಗ್ರಾಮರ್ ಕಂ ಆಪರೇಟರ್ ಟ್ರೇಡಗಳಿಗೆ ಅಪ್ರೆಂಟಿಸ್ ತರಬೇತಿಗೆ ಅರ್ಜಿ ಆಹ್ವಾನಿಸಿದ್ದು, ಅಪ್ರೆಂಟಿಸ್ ತರಬೇತಿಯು ಒಂದು ವರ್ಷ ಅವಧಿಯದ್ದಾಗಿದೆ. ಎಸ್.ಎಸ್.ಎಲ್.ಸಿ ಯಲ್ಲಿ ಉತ್ತೀರ್ಣಗೊಂಡು, ಸಂಬಂಧಪಟ್ಟ ಟ್ರೇಡ್‌ಗಳಲ್ಲಿ ಐ.ಟಿ.ಐ ತರಬೇತಿ ಪಡೆದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ತರಬೇತಿಗೆ ವೆಬ್‌ಸೈಟ್ www.apprenticeshipindia.gov.in ಅಥವಾ www.halindia.com/career ಪೋರ್ಟಲ್‌ನಲ್ಲಿ ಆನ್‌ಲೈನ್ ಮೂಲಕ ನೊಂದಾಯಿಸಬಹುದು. ಅರ್ಜಿ ಸಲ್ಲಿಕೆಗೆ ಅ.10 ಕೊನೆಯ ದಿನವಾಗಿದೆ. ಎಸ್.ಎಸ್.ಎಲ್.ಸಿ ಅಂಕಪಟ್ಟಿ, ಐ.ಟಿ.ಐ ಪ್ರಮಾಣ ಪತ್ರ ಅಥವಾ ಸ್ವ–ದೃಢೀಕೃತ ರಿಸಲ್ಟ್‌ಶೀಟ್, ಜಾತಿ ಮತ್ತು ಆದಾಯ, ಅಂಗವಿಕಲರ, ಆರ್ಮ್‌ಡ್ ಪರ್ಸನಲ್ ಪ್ರಮಾಣ ಪತ್ರ, ಆಧಾರ್ ಕಾರ್ಡ್ ಜೆರಾಕ್ಸ್, ಅಭ್ಯರ್ಥಿಯ 4 ಭಾವಚಿತ್ರಗಳು ಹಾಗೂ ಎನ್‌ಸಿವಿಟಿ ಎಮ್‌ಐಎಸ್ (ಓಅಗಿಖಿ ಒಋಖ) ತಂತ್ರಾಂಶದಲ್ಲಿ ನೊಂದಣಿಯಾದ ಕುರಿತ ವಿವರಗಳನ್ನು ಅರ್ಜಿ ಸಲ್ಲಿಸುವಾಗ ಭರ್ತಿಮಾಡಬೇಕು. ಹೆಚ್ಚಿನ ಮಾಹಿತಿ ಹಾಗೂ ಅರ್ಜಿ ಸಲ್ಲಿಸಲು ನೊಂದಾಯಿಸಿಕೊಳ್ಳಲು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಭೇಟಿ ನೀಡಬಹುದು. ದೂರವಾಣಿ ಸಂಖ್ಯೆ 9945587060, 7022459064, 7019755147 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗಾಧಿಕಾರಿ ತಿಳಿಸಿದ್ದಾರೆ.

### ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಮಾಹಿತಿ

# 1.20 ಲಕ್ಷ ಜನರಿಂದ ಮಾನವ ಸರಪಳಿ

» ಚಿತ್ರದುರ್ಗ

ಸೆಪ್ಟಂಬರ್ 15 ರಂದು ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಜಿಲ್ಲೆಯಾದ್ಯಂತ 145 ಕಿ.ಮೀ ಮಾನವ ಸರಪಳಿ ನಿರ್ಮಿಸಲಾಗುತ್ತಿದ್ದು, ಈ ಕಾರ್ಯಕ್ರಮದಲ್ಲಿ ಜಿಲ್ಲೆಯಲ್ಲಿ ಸುಮಾರು 1.20 ಲಕ್ಷ ಜನರು ಪಾಲ್ಗೊಳ್ಳಲಿದ್ದಾರೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಮಾನವ ಸರಪಳಿ ರಚಿಸುವ ನಿಟ್ಟಿನಲ್ಲಿ ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರೊಂದಿಗೆ ಹಮ್ಮಿಕೊಂಡಿದ್ದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನದ ಅಂಗವಾಗಿ ಮಾನವ ಸರಪಳಿ ಕಾರ್ಯಕ್ರಮಕ್ಕೆ ಜಿಲ್ಲೆಯ ಸಾರ್ವಜನಿಕರು ಸ್ವಯಂಪ್ರೇರಿತರಾಗಿ ಆಗಮಿಸಿದಾಗ ಕಾರ್ಯಕ್ರಮ ಅರ್ಥಪೂರ್ಣವಾಗಲಿದೆ. ಈ ನಿಟ್ಟಿನಲ್ಲಿ ಶಾಲಾ–ಕಾಲೇಜು ವಿದ್ಯಾರ್ಥಿಗಳು,ಸ್ವಯಂಸೇವಕರು,ಸಂಘ–ಸಂಸ್ಥೆಗಳ ಸದಸ್ಯರು, ಜನಪ್ರತಿನಿಧಿಗಳು, ಸರ್ಕಾರೇತರ ಸಂಸ್ಥೆಗಳು ಹಾಗೂ ಕಡ್ಡಾಯವಾಗಿ ಸರ್ಕಾರಿ ಅಧಿಕಾರಿಗಳು, ನೌಕರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.



ಜಿಲ್ಲೆಯ ಗಡಿಭಾಗ ಮೊಳಕಾಲ್ಮುರು ತಾಲ್ಲೂಕಿನ ಮೇಲಿನ ಕಣಿವೆ ಗ್ರಾಮದಿಂದ ಹಿರಿಯೂರು ತಾಲ್ಲೂಕಿನ ಜವಗೊಂಡನಹಳ್ಳಿ ಯವರೆಗೆ ಜಿಲ್ಲಾ ವ್ಯಾಪ್ತಿಯಲ್ಲಿ ಒಟ್ಟು 145 ಕಿ.ಮೀ ದೂರದವರೆಗೆ ಮಾನವ ಸರಪಳಿ ನಿರ್ಮಿಸಲು ಯೋಜನೆ ರೂಪಿಸಲಾಗಿದ್ದು, ಈ ಕಾರ್ಯಕ್ರಮದಲ್ಲಿ ಜಿಲ್ಲೆಯಲ್ಲಿ ಸುಮಾರು 1.20 ಲಕ್ಷ ಜನರು ಭಾಗವಹಿಸಲಿದ್ದಾರೆ. ಈ ಕುರಿತು ಕಳೆದ ವಾರದಿಂದಲೂ ಎಲ್ಲ ತಾಲ್ಲೂಕುಗಳಲ್ಲಿಯೂ ನಿರಂತರವಾಗಿ ಸಭೆಗಳನ್ನು ನಡೆಸಿ, ಅಗತ್ಯ ಸಿದ್ಧತೆ ಕೈಗೊಳ್ಳಲಾಗುತ್ತಿದೆ. ಜಿಲ್ಲೆಯ ಮೊಳಕಾಲ್ಮುರು, ಚಳ್ಳಕೆರೆ ಹಾಗೂ ಹಿರಿಯೂರು ತಾಲ್ಲೂಕುಗಳಲ್ಲಿ ಮಾನವ ಸರಪಳಿ ನಿರ್ಮಿಸಲಾಗುತ್ತಿದ್ದು, ಉಳಿದ ಮೂರು ತಾಲ್ಲೂಕುಗಳಾದ ಚಿತ್ರದುರ್ಗ, ಹೊಳಲ್ಕೆರೆ ಹಾಗೂ ಹೊಸದುರ್ಗ ತಾಲ್ಲೂಕುಗಳ ಸಾರ್ವಜನಿಕರು ಈ ಕಾರ್ಯಕ್ರಮದಲ್ಲಿ ಕೈಜೋಡಿಸಬೇಕು ಎಂದು ಹೇಳಿದರು.

ರಾಜ್ಯಾದ್ಯಂತ ಏಕಕಾಲಕ್ಕೆ ನಡೆಯುವ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮ ಸೆ.15ರಂದು ಬೆಳಿಗ್ಗೆ 9.30 ರಿಂದ 10.30 ರವರೆಗೆ ನಡೆಯಲಿದೆ. ಕಾರ್ಯಕ್ರಮದ ಅಂಗವಾಗಿ ಸಸಿ ನೆಡುವ ಕಾರ್ಯಕ್ರಮ ಹಾಗೂ ಸಂವಿಧಾನ ಪೀಠಿಕೆ ವಾಚನ ಕಾರ್ಯಕ್ರಮವೂ ನಡೆಯಲಿದೆ. ರಾಜ್ಯಾದ್ಯಂತ ಏಕಕಾಲಕ್ಕೆ ಕಾರ್ಯಕ್ರಮ ನಡೆಯುವುದರಿಂದ ಮಾನವ ಸರಪಳಿ ಕಾರ್ಯಕ್ರಮ ಗಿನ್ನೆಸ್ ದಾಖಲೆಯಾಗಲಿದೆ. ಹಾಗಾಗಿ ಈ ಕಾರ್ಯಕ್ರಮವನ್ನು ಜಿಲ್ಲೆಯಲ್ಲಿ ಆಕರ್ಷಕವಾಗಿ ಹಾಗೂ ವಿಶೇಷ ಕಾಳಜಿ ವಹಿಸಿ ಯಶಸ್ವಿಗೊಳಿಸಬೇಕು ಎಂದು ಹೇಳಿದರು.ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಮಾತನಾಡಿ, ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನದ ಅಂಗವಾಗಿ ಕರ್ನಾಟಕ ಉತ್ತರ ತುದಿಯಿಂದ ದಕ್ಷಿಣ ತುದಿಯವರೆಗೆ ಅಂದರೆ ಬೀದರ್‌ನಿಂದ ಚಾಮರಾಜನಗರ ವರೆಗೆ, ಸುಮಾರು 25 ಲಕ್ಷ ಮಾನವ ಸರಪಳಿ ರಚಿಸುವ ಮೂಲಕ ಆಚರಿಸಲು ಸರ್ಕಾರ ನಿರ್ಧರಿಸಿದೆ. ಪ್ರಜಾಪ್ರಭುತ್ವವು ಸಮಾನತೆ, ಸ್ವಾತಂತ್ರ್ಯ ಮತ್ತು ಭ್ರಾತೃತ್ವದ ಆದರ್ಶಗಳು ಭಾರತೀಯ ಸಂವಿಧಾನ ಪೀಠಿಕೆಯ ಭಾಗ. ಪ್ರಜಾಪ್ರಭುತ್ವದ ಅಂಶಗಳನ್ನು ಪ್ರತಿಯೊಬ್ಬರಿಗೂ ಮುಟ್ಟಿಸುವ ಕಾಳಜಿಯಿಂದ ಮಾನವ ಸರಪಳಿ ನಿರ್ಮಾಣ ಮಾಡುವ ಮೂಲಕ ಪ್ರಜಾಪ್ರಭುತ್ವ ಮೌಲ್ಯ ಗೌರವಿಸುವಂತಹ ವಿಭಿನ್ನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು. ಸಭೆಯಲ್ಲಿ ಚಿತ್ರದುರ್ಗ ನಗರಸಭೆ ಅಧ್ಯಕ್ಷೆ ಸುಮಿತಾ ರಾಘವೇಂದ್ರ, ನಾಯಕನಹಟ್ಟಿ ಪ.ಪಂ. ಅಧ್ಯಕ್ಷೆ ಮಂಜುಳಾ ಶ್ರೀಕಾಂತ್, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಪುಟ್ಟಸ್ವಾಮಿ, ನಗರಾಭಿವೃದ್ಧಿ ಕೋಶ ಯೋಜನಾ ನಿರ್ದೇಶಕ ಮಹೇಂದ್ರ ಕುಮಾರ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ವಿವಿಧ ಪದವಿಪೂರ್ವ ಹಾಗೂ ಪದವಿ ಕಾಲೇಜುಗಳ ಪ್ರಾಂಶುಪಾಲರು, ಉಪನ್ಯಾಸಕರು, ನಗರ ಸ್ಥಳೀಯ ಸಂಸ್ಥೆಗಳ ಅಧ್ಯಕ್ಷರು, ನಗರಸಭೆ ಪೌರಾಯುಕ್ತರು, ಮುಖ್ಯಾಧಿಕಾರಿಗಳು ಇದ್ದರು.



## ಖಾಸಗಿ ಬಸ್ ಟಾಪ್ ಮೇಲೆ ರಾಶಿ ಜನ, ಬಸ್ ವಶಕ್ಕೆ ಪಡೆದ ಟ್ರಾಫಿಕ್ ಪೋಲಿಸ್

» ನಮ್ಮಜನ ಸಮಾಚಾರ ಚಿತ್ರದುರ್ಗ



ನಗರದ ಜೆ.ಎಂ.ಐ.ಟಿ ಸರ್ಕಲ್ ಬಳಿ ಬಳಿ ಜಗಳೂರು ಕಡೆಯಿಂದ ಚಿತ್ರದುರ್ಗ ಬಸ್ ನಿಲ್ದಾಣದ ಕಡೆಗೆ ಖಾಸಗಿ ಬಸ್ ಟಾಪ್ ಮೇಲೆ 25 ರಿಂದ 30 ಜನರನ್ನು ಕೂರಿಸಿಕೊಂಡು ಬಂದಿದ್ದು ಇದನ್ನೂ ಗಮನಿಸಿದ ಟ್ರಾಫಿಕ್ ಪೋಲಿಸರು ಬಸ್ ವಶಕ್ಕೆ ಪಡ ಗಾದಿಲಿಂಗೇಶ್ವರ ಖಾಸಗಿ ಬಸ್ ( ಏಂ–16 ೦–9936) ಚಾಲಕರು ಇಷ್ಟೊಂದು ಕಾನೂನು ಕಟ್ಟಲ್ಪಣೆಗೆ ಸೆಡ್ಡೆ ಒಡೆಯುವಂತೆ 25 ರಿಂದ 30 ಜನರನ್ನು ಟಾಪ್ ಮೇಲೆ ಕೂರಿಸಿದ್ದಲ್ಲದೇ ಅವರ ಪ್ರಾಣಕ್ಕೆ ಸಂಚಕಾರ ಬರುವಂತೆ ಬಸ್ ಚಾಲನೆ ಮಾಡಿದ್ದು ಚಾಲಕ ಕಂಚೋಬಳಪ್ಪ, ನಿರ್ವಾಹಕ ದಿನೇಶ್, ಬಸ್ ಮಾಲೀಕ ಎಸ್.ಜಯಕುಮಾರ್ ಮೇಲೆ ಸಂಚಾರಿ ಠಾಣೆ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

### ಪ್ರಮುಖ ಸುದ್ದಿ

# ಡಿಸಿಸಿ ಚುನಾವಣೆ ಸುಧಾಕರ್ ಬಣದ 7ಮಂದಿ ಗೆಲುವು

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ, ಚಿತ್ರದುರ್ಗ ಇದರ ಆಡಳಿತ ಮಂಡಳಿ ಸಾಮಾನ್ಯ ಚುನಾವಣೆಯಲ್ಲಿ ಸಚಿವ ಸುಧಾಕರ್ ತಂಡ ಗೆಲುವನ್ನು ಸಾಧಿಸಿದೆ. ಚುನಾವಣೆ ದಿನಾಂಕದಿಂದ ಮುಂದಿನ 5 ವರ್ಷಗಳ ಅವಧಿಗೆ ಇಂದು ನಡೆದಿರುವ ಚುನಾವಣೆಯ 12 ಸ್ಥಾನಗಳಲ್ಲಿ 7 ಸ್ಥಾನಗಳಿಗೆ ಅವಿರೋದ ಆಯ್ಕೆ ನಡೆದಿದ್ದು ಇಂದು ನಡೆದ ಚುನಾವಣೆಯಲ್ಲಿ ಉಳಿದ 5 ಸ್ಥಾನಗಳಿಗೆ ಬೆಳಿಗ್ಗೆ 9 ರಿಂದ ಸಂಜೆ 4 ವರೆಗೆ ಚುನಾವಣೆಯ ಮೂಲಕ ಆಯ್ಕೆ ಮಾಡಲಾಗಿದೆ.





ಈ ಚುನಾವಣೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ ರವರ ತಂಡ ಗೆಲುವು ಸಾಧಿಸುವುದರ ಮೂಲಕ ಮತ್ತೊಮ್ಮೆ ಡಿಸಿಸಿ ಬ್ಯಾಂಕ್‌ನ ಅಧಿಕಾರವನ್ನು ಹಿಡಿದಿದೆ. ಇದರಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಚಳ್ಳಕೆರೆ ತಾಲ್ಲೂಕು 'ಎ' ಕ್ಷೇತ್ರದಿಂದ ಡಿ.ಸುಧಾಕರ್ ಬಿನ್ ಎನ್.ದಶರಥಯ್ಯ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಹೊಳಲ್ಕೆರೆ ತಾಲ್ಲೂಕು 'ಎ' ಕ್ಷೇತ್ರದಿಂದ ಎಸ್.ಆರ್.ಗಿರೀಶ್ ಬಿನ್ ಲೇಟ್ ಎಸ್.ರುದ್ರಪ್ಪ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಹಿರಿಯೂರು ತಾಲ್ಲೂಕು 'ಎ' ಕ್ಷೇತ್ರದಿಂದ ಓ.ಮಂಜುನಾಥ್ ಬಿನ್ ಓಬನಾಯಕ, ಜಿಲ್ಲಾಧ್ಯಾಂತ ಎಲ್ಲಾ ತಾಲ್ಲೂಕು ಕೃಷಿ ಉತ್ಪನ್ನ ಮಾರಾಟ ಸಹಕಾರ ಸಂಘಗಳ 'ಬಿ' ಕ್ಷೇತ್ರದಿಂದ ಹೆಚ್.ಬಿ.ಮಂಜುನಾಥ್ ಬಿನ್ ಟಿ.ಎಚ್.ಬಸವರಾಜಪ್ಪ, ಜಿಲ್ಲಾಧ್ಯಾಂತ ನೇಕಾರಿಕೆ ಸಹಕಾರ ಸಂಘಗಳ 'ಇ' ಕ್ಷೇತ್ರದಿಂದ ಕೆ.ಜಗಣ್ಣ ಬಿನ್ ಕೆಂಚಪ್ಪ, ಜಿಲ್ಲಾಧ್ಯಾಂತ ಎಲ್ಲಾ ಪಟ್ಟಣ ಸಹಕಾರ ಬ್ಯಾಂಕುಗಳ ಮತ್ತು ವ್ಯವಸಾಯೇತರ ಪತ್ತಿನ ಸಹಕಾರ ಸಂಘಗಳ 'ಸಿ' ಕ್ಷೇತ್ರ ದಿಂದ ರಘುರಾಮ ರೆಡ್ಡಿ ಬಿನ್ ಎಸ್.ಆರ್.ಲಕ್ಷ್ಮೀಕಾಂತರೆಡ್ಡಿ, ಚಿತ್ರದುರ್ಗ, ಹೊಸದುರ್ಗ & ಹೊಳಲ್ಕೆರೆ ತಾಲ್ಲೂಕುಗಳ ಹಾಲು ಉತ್ಪಾದಕರ ಸಹಕಾರ ಸಂಘಗಳ'ಡಿ'ಕ್ಷೇತ್ರದಿಂದ ಪಿ.ತಿಪ್ಪೇಸಾಮಿ ಬಿನ್ ಪರಮೇಶ್ವರಪ್ಪ ಇವರು ನಾಮಪತ್ರ ವಾಪಾಸ್ ಪಡೆಯುವ ಸಮಯದಲ್ಲಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಇಂದು ನಡೆದ ಚುನಾವಣೆಯಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಚಿತ್ರದುರ್ಗ ತಾಲ್ಲೂಕು 'ಎ' ಕ್ಷೇತ್ರದಿಂದ ಹೆಚ್.ಎಂ.ದ್ಯಾಮಣ್ಣ ಬಿನ್ ಹೆಚ್.ಮಹೇಶ್ವರಪ್ಪ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಹೊಸದುರ್ಗ ತಾಲ್ಲೂಕು 'ಎ' ಕ್ಷೇತ್ರದಿಂದ ಕೆ.ಆನಂತ್ ಬಿನ್ ಕೆಂಚಪ್ಪ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಮೊಳಕಾಲ್ಲೂರು ತಾಲ್ಲೂಕು 'ಎ' ಕ್ಷೇತ್ರ ದಿಂದ ಹೆಚ್.ಟಿ.ನಾಗರೆಡ್ಡಿ ಬಿನ್ ಹೊಸಕೋಟೆ ತಿಮ್ಮಪ್ಪ, ಚಳ್ಳಕೆರೆ, ಹಿರಿಯೂರು & ಮೊಳಕಾಲೂರು ತಾಲ್ಲೂಕುಗಳ ಹಾಲು ಉತ್ಪಾದಕರ ಸಹಕಾರ ಸಂಘಗಳ ಡಿ.ಕ್ಷೇತ್ರದಿಂದ ಪಿ.ವಿನೋದಸ್ವಾಮಿ ಕೋಂ ಜಿ.ತಿಪ್ಪೇಸ್ವಾಮಿ, ಜಿಲ್ಲೆಯಲ್ಲಿನ ಇನ್ನಿತರೆ ಸಹಕಾರ ಸಂಘಗಳ 'ಎಫ್' ಕ್ಷೇತ್ರ ದಿಂದ ಎಂ.ನಿಶಾನಿ ಜಯಣ್ಣ ಬಿನ್ ಜಿ.ಎನ್.ಮಲ್ಲಪ್ಪ ಆಯ್ಕೆಯಾಗಿದ್ದಾರೆ. ಈ ಅಭ್ಯರ್ಥಿಗಳು ಮುಂದಿನ 5 ವರ್ಷಗಳ ಅವಧಿಗೆ ಅವಿರೋಧವಾಗಿ ಹಾಗೂ ಚುನಾವಣೆಯ ಮೂಲಕ ಕ್ರಮಬದ್ಧವಾಗಿ ಆಯ್ಕೆಯಾಗಿರುತ್ತಾರೆ ಎಂದು ರಿಟರ್ನಿಂಗ್ ಆಫೀಸರ್, ಚಿತ್ರದುರ್ಗ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ,. ಚಿತ್ರದುರ್ಗ ಹಾಗೂ ಉಪವಿಭಾಗಾಧಿಕಾರಿ, ಚಿತ್ರದುರ್ಗ ಉಪ ವಿಭಾಗ, ಚಿತ್ರದುರ್ಗ ಇವರ ತಿಳಿಸಿದ್ದಾರೆ.

## ಫಾಸ್ಟ್ ನ್ಯೂಸ್

### 18 ರಂದು ಡಿ.ಎಲ್.ಆರ್.ಸಿ ಸಭೆ

■ ಚಿತ್ರದುರ್ಗ

ಜಿಲ್ಲಾ ಪಂಚಾಯಿತಿ ಮಿನಿ ಸಭಾಂಗಣದಲ್ಲಿ ಇದೇ ಸೆ.18 ರಂದು ಬೆಳಿಗ್ಗೆ 11 ಗಂಟಗೆ ಜಿ.ಪಂ ಸಿಇಓ ಎಸ್.ಜೆ.ಸೋಮಶೇಖರ್ ಅಧ್ಯಕ್ಷತೆಯಲ್ಲಿ ಲೀಡ್ ಬ್ಯಾಂಕ್‌ಗೆ ಸಂಬಂಧಿಸಿದಂತೆ ಡಿ.ಎಲ್. ಆರ್.ಸಿ (ಜಿಲ್ಲಾ ಮಟ್ಟದ ಸಲಹಾ ಮತ್ತು ಪರಿಶೀಲನಾ) ಮತ್ತು ಡಿ.ಸಿ.ಸಿ ಸಭೆ ನಡೆಯಲಿದೆ. ವಿಶೇಷ ಆಹ್ವಾನಿತರಾಗಿ ಸಂಸದ ಗೋವಿಂದ ಎಂ ಕಾರಜೋಳ ಭಾಗವಹಿಸುವರು.

### ವಿಶ್ವೇಶ್ವರಯ್ಯ ನಿಧನ

» ಚಿತ್ರದುರ್ಗ



ಇಲ್ಲಿನ ಗುಮಾಸ್ತ ಕಾಲೋನಿ ನಿವಾಸಿ ವಿಶ್ವೇಶ್ವರಯ್ಯ(60) ಗುರುವಾರ ಮುಂಜಾನೆ ನಿಧನ ಹೊಂದಿದರು. ಮೃತರು ಪತ್ನಿ ಹಾಗೂ ಇಬ್ಬರು ಪುತ್ರರ ಅಗಲಿದ್ದಾರೆ. ಶುಕ್ರವಾರ ಬೆಳಿಗ್ಗೆ ಸಿರಿಗೆಯಲ್ಲಿ ಅಂತ್ಯಸಂಸ್ಕಾರ ನೆರವೇರಲಿದೆ ಎಂದು ಕುಟುಂಬ ಮೂಲಗಳು ತಿಳಿಸಿವೆ.

### ವೃತ್ತಿ ರಂಗಭೂಮಿ ರಂಗಾಯಣದಿಂದ ವಿವಿಧ ಕಾರ್ಯಕ್ರಮ

» ದಾವಣಗೆರೆ

ದಾವಣಗೆರೆ ವೃತ್ತಿ ರಂಗಭೂಮಿ ರಂಗಾಯಣ ವತಿಯಿಂದ ಸೆಪ್ಟೆಂಬರ್ 15 ರಂದು ಬೆಳಿಗ್ಗೆ 10.30 ಕ್ಕೆ ಬಾಪೂಜಿ ಸಭಾಂಗಣದಲ್ಲಿ ನಾಂದಿ ಆರಂಭೋತ್ಸವ ರಾಜ್ಯ ಮಟ್ಟದ ವಿಚಾರ ಸಂಕಿರಣ, ರಂಗಗೀತೆಗಳ ಗಾಯನ, ನಾಟಕ ಪ್ರದರ್ಶನ ಏರ್ಪಡಿಸಲಾಗಿದೆ. ಸಂಜೆ 4.00 ಗಂಟೆಗೆ ನಾಂದಿ ಆರಂಭೋತ್ಸವ ಹಾಗೂ ಸಂಜೆ 6.00 ಗಂಟೆಗೆ ಅಕ್ಕಮಹಾದೇವಿ ನಾಟಕ ಪ್ರದರ್ಶನ ಉದ್ಘಾಟನಾ ಸಮಾರಂಭವನ್ನು ಆಯೋಜಿಸಲಾಗಿದೆ. ಗಣಿ ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್ ಮಲ್ಲಿಕಾರ್ಜುನ್‌ನವರು ಕಾರ್ಯಕ್ರಮ ಉದ್ಘಾಟಿಸುವರು. ದಕ್ಷಿಣ ಕ್ಷೇತ್ರ ಶಾಸಕರಾದ ಡಾ.ಶಾಮನೂರು ಶಿವಶಂಕರಪ್ಪ ಅಧ್ಯಕ್ಷತೆ ವಹಿಸುವರು. ಶ್ರೀ ಪಂಡಿತಾರಾಧ್ಯ ಶಿವಚಾರ್ಯಸ್ವಾಮೀಜಿಅವರುಸಾನಿಧ್ಯವಹಿಸಲಿದ್ದು ಹಂಸಲೇಖ ಅವರು ರಂಗಜ್ಯೋತಿ ಬೆಳಗುವಿಕೆ ಕಾರ್ಯಕ್ರಮ ನಡೆಸಿಕೊಡುವರು. ವರ್ತಮಾನದ ವೃತ್ತಿ ರಂಗಭೂಮಿ ಬಿಕ್ಕಟ್ಟು ಮತ್ತು ಪರಿಹಾರ ಅಧ್ಯಕ್ಷತೆ ಎಲ್.ಬಿ. ಷೇಕ್ ಮಾಸ್ತರ, ದಿಕ್ಸೂಚಿ ನುಡಿ ಸಿ. ಬಸವಲಿಂಗಯ್ಯ, ಪ್ರಬಂಧ ಮಂಡನೆ ಡಾ. ಪ್ರಕಾಶ ಗರುಡ, ವಿಷಯ; ನಾಟಕ ಕಂಪನಿ ಪರಂಪರೆ ಮತ್ತು ಪ್ರಯೋಗಶೀಲತೆ ಬಸವರಾಜ ಬೆಂಗೇರಿ, ಸಾಹಿತ್ಯ ಮತ್ತು ಸಂಗೀತ ಅರುಣ್ ಸಾಗರ್, ರಂಗ ಪರಿಕರ ಮತ್ತು ರಂಗ ಸಜ್ಜಿಕೆ ನಿರ್ವಹಣೆ,ನಿರೂಪಣೆ ಶ್ರೀಧರ ಹೆಗಡೆ. ಮುಖ್ಯ ಅತಿಥಿಗಳಾಗಿ ಮಾಯಕೊಂಡ ಶಾಸಕರಾದ ಕೆ.ಎಸ್. ಬಸವಂತಪ್ಪ, ವಿಧಾನ ಪರಿಷತ್ ಮಾಜಿ ಸದಸ್ಯರಾದ ಮೋಹನ್ ಕುಮಾರ ಕೊಂಡಜ್ಜಿ, ಮಹಾಪೌರರಾದ ವಿನಾಯಕ ಬಿ.ಹೆಚ್, ವಿಧಾನ ದಾವಣಗೆರೆ-ಹರಿಹರ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರಾದ ದಿನೇಶ್ ಕೆ. ಶೆಟ್ಟಿ, ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ, ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಸುರೇಶ ಬಿ. ಇಟ್ನಾಳ್, ಧಾರವಾಡ ರಂಗಯಣ ನಿರ್ದೇಶಕರಾದ ಡಾ.ತಾಳಿಕೋಟೆ, ಗುಬ್ಬಿವೀರಣ್ಣ ಪ್ರಶಸ್ತಿ ಪುರಸ್ಕೃತರಾದ ಚಿಂದೋಡಿ ಶ್ರೀಕಂಠೇಶ್ ಹಾಗೂ ಇನ್ನಿತರರು ಭಾಗವಹಿಸುವರು.

### ಮುಖ್ಯಮಂತ್ರಿಯವರ ಮಾಧ್ಯಮ ಸಲಹೆಗಾರರ ಜಿಲ್ಲಾ ಪ್ರವಾಸ

» ದಾವಣಗೆರೆ

ಮುಖ್ಯಮಂತ್ರಿಯವರ ಮಾಧ್ಯಮ ಸಲಹೆಗಾರರಾದ ಕೆ.ವಿ ಪ್ರಭಾಕರ್ ಅವರು ಸೆಪ್ಟೆಂಬರ್ 13 ರಂದು ದಾವಣಗೆರೆ ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ. ಸೆ.13 ರಂದು ಮಧ್ಯಾಹ್ನ 3 ಗಂಟೆಗೆ ದಾವಣಗೆರೆ ಆಗಮಿಸಿ ಕುವೆಂಪು ಕನ್ನಡ ಭವನದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದಿಂದ ಆಯೋಜಿಸಿರುವ ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಸಜೆಜೆ 5 ಗಂಟೆಗೆ ಬೆಂಗಳೂರಿಗೆ ಪ್ರಯಾಣಿಸುವರು.

### ಲೋಕಾಯುಕ್ತ ಪೋಲೀಸ್ ಅಧೀಕ್ಷಕರಿಂದ ಅಹವಾಲು ಸ್ವೀಕಾರ

» ದಾವಣಗೆರೆ

ದಾವಣಗೆರೆ ವಿಭಾಗದ ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಎಂ.ಎಸ್ ಕೌಲಾಪೂರೆ ಅವರು ಚನ್ನಗಿರಿ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸೆಪ್ಟೆಂಬರ್ 17 ರಂದು ಬೆಳಗ್ಗೆ 11 ರಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಸಾರ್ವಜನಿಕರಿಂದ ಅಹವಾಲು ಸ್ವೀಕಾರಿಸುವರು.

ಸಾರ್ವಜನಿಕರು ವಿವಿಧ ಇಲಾಖೆಗಳಿಗೆ ಸಲ್ಲಿಸಿದ ಅರ್ಜಿಗಳನ್ನು ವಿಲೇ ಮಾಡದೇ ಬಾಕಿ ಇಟ್ಟಿದಲ್ಲಿ ಅಂತಹ ದೂರುಗಳನ್ನು ಸಲ್ಲಿಸಬಹುದೆಂದು ತಿಳಿಸಿದ್ದಾರೆ.

## ಪ್ರಜಾಪ್ರಭುತ್ವ ದಿನದ ಲಾಂಛನ ಬಿಡುಗಡೆ

# ಪ್ರಜಾಪ್ರಭುತ್ವದ ಸ್ಪೂರ್ತಿ ಎತ್ತಿಹಿಡಿಯಲು ಎಲ್ಲರೂ ಕೈಜೋಡಿಸಿ: ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಕರೆ

» ಚಿತ್ರದುರ್ಗ

ಸ್ವಾತಂತ್ರ್ಯ, ಸಮಾನತೆ ಮತ್ತು ಭ್ರಾತೃತ್ವದ ತತ್ವದಮೇಲೆಎಲ್ಲಜನರುರಾಜ್ಯಾಧಿಕಾರದಲ್ಲಿ ಪಾಲ್ಗೊಳ್ಳಲು ಅವಕಾಶ ನೀಡುವ ಅತ್ಯುನ್ನತ ಆಡಳಿತ ಪದ್ಧತಿ ಪ್ರಜಾಪ್ರಭುತ್ವವಾಗಿದೆ. ಪ್ರಜೆಗಳೇ ಪ್ರಭುಗಳು ಎನ್ನುವ ಪ್ರಜಾಪ್ರಭುತ್ವದ ಸ್ಪೂರ್ತಿ ಎತ್ತಿ ಹಿಡಿಯಲು ಜಿಲ್ಲೆಯ ಎಲ್ಲಾ ಸಾರ್ವಜನಿಕರು, ಸಂಘ ಸಂಸ್ಥೆಗಳು, ಸಂಘಟನೆಗಳು ಸೆ. 15 ರಂದು ಜರುಗುವ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯ ಕಾರ್ಯಕ್ರಮದ ಯಶಸ್ವಿಗೆ ಕೈ ಜೋಡಿಸುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಕರೆ ನೀಡಿದರು.

ನಗರದ ಜಿ.ಪಂ. ಸಭಾಂಗಣದಲ್ಲಿ ಗುರುವಾರ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಮಾನವ ಸರಪಳಿ ರಚಿಸುವ ನಿಟ್ಟಿನಲ್ಲಿ ಜಿಲ್ಲೆಯ ಸರ್ಕಾರೇತರ ಸಂಘ ಸಂಸ್ಥೆಗಳು ಹಾಗೂ ಸಂಘಟನೆಗಳ ಮುಖಂಡರು ಹಾಗೂ ಸಾರ್ವಜನಿಕರ ಸಭೆ ನಡೆಸಿ ಅವರು ಮಾತನಾಡಿದರು.

ಸೆ. 15 ರಂದು ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಅಂದು ಜಿಲ್ಲೆಯಾದ್ಯಂತ 145 ಕಿ.ಮೀ ಮಾನವ ಸರಪಳಿ ನಿರ್ಮಿಸಲಾಗುತ್ತಿದೆ. ಜಿಲ್ಲೆಯ ಮೊಳಕಾಲ್ಮೂರು, ಚಳ್ಳಕೆರೆ,




ಹಿರಿಯೂರು ತಾಲ್ಲೂಕುಗಳಲ್ಲಿ ಮಾನವ ಸರಪಳಿ ರಚಿಸಲಾಗುತ್ತಿದೆ. ಮಾನವ ಸರಪಳಿ ಬಹುತೇಕ ರಾಷ್ಟ್ರೀಯ ಹೆದ್ದಾರಿಯಲ್ಲಿಯೇ ಸಾಗಲಿದೆ. ಈ ಹೆದ್ದಾರಿಯ ಇಕ್ಕೆಲಗಳಲ್ಲಿ ಬರುವ ಎಲ್ಲಾ ಗ್ರಾಮಗಳ ಜನರು ಮಾನವ ಸರಪಳಿಯಲ್ಲಿ ಪಾಲ್ಗೊಳ್ಳುವರು. ಈ ಕಾರ್ಯಕ್ರಮದಲ್ಲಿ ಚಿತ್ರದುರ್ಗ, ಹೊಳಲ್ಕೆರೆ ಹಾಗೂ ಹೊಸದುರ್ಗ ತಾಲ್ಲೂಕುಗಳ ಸಾರ್ವಜನಿಕರು ಕೂಡ ಭಾಗವಹಿಸಬೇಕು. ಮುಖ್ಯವಾಗಿ ಸಂಘ ಸಂಸ್ಥೆಗಳು, ಸಂಘಟನೆಗಳು ಪಾಲ್ಗೊಳ್ಳುವ ಮೂಲಕ ಪ್ರಜಾಪ್ರಭುತ್ವದ ಸೂರ್ತಿಯನ್ನು ಜಗತ್ತಿಗೆ ಸಾರುವಲ್ಲಿ ಕೈ ಜೋಡಿಸಬೇಕು ಎಂದರು.

ರಾಜ್ಯಾದ್ಯಂತ ಏಕಕಾಲಕ್ಕೆ ನಡೆಯುವ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ಕಾರ್ಯಕ್ರಮ ಸೆ.15 ರಂದು ಬೆಳಿಗ್ಗೆ 9.30 ರಿಂದ 10.30 ರವರೆಗೆ ನಡೆಯಲಿದೆ. ಕಾರ್ಯಕ್ರಮದ ಅಂಗವಾಗಿ ಸಸಿ ನೆಡುವ ಕಾರ್ಯಕ್ರಮ ಹಾಗೂ ಸಂವಿಧಾನ ಪೀಠಿಕೆ ವಾಚನ ನಡೆಯಲಿದೆ. ರಾಜ್ಯಾದ್ಯಂತ ಏಕಕಾಲಕ್ಕೆ ನಡೆಯುವ ಮಾನವ ಸರಪಳಿ ಕಾರ್ಯಕ್ರಮ ಗಿನ್ನೆಸ್ ದಾಖಲೆಯಾಗಲಿದೆ. ಸಾರಿಗೆ ಇಲಾಖೆ, ಖಾಸಗಿ ಸಾರಿಗೆ ಸಂಸ್ಥೆಗಳು ಸಹ ಕಾರ್ಯಕ್ರಮದ ಯಶಸ್ವಿಗೆ ಸಹರಿಸಲಿವೆ. ರಾಜ್ಯಮಟ್ಟದಲ್ಲಿ ಕಾರ್ಯಕ್ರಮದ ಯಶ್ವಸಿಗೆ ರೋಟರಿ, ಇಂಟರ್‌ನ್ಯಾಷನಲ್, ಸಿವಿಲ್ ಸೊಸೈಟಿ ಹಾಗೂ ಇತರೆ ಪ್ರಮುಖ ಸರ್ಕಾರೇತರ ಸಂಸ್ಥೆಗಳು ಸಹಯೋಗ ನೀಡಿವೆ. ಸರ್ಕಾರದಿಂದ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವದ ಸುಂದರವಾದ ಲೋಗೋ ಸಹ ಬಿಡುಗಡೆ ಮಾಡಲಾಗಿದೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದರು.

ಸಭೆಯಲ್ಲಿಜಿ.ಪಂ.ಮುಖ್ಯಕಾರ್ಯದರ್ಶಿ ತಿಮ್ಮಪ್ಪ, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಹರೀಶ್ ಸೇರಿದಂತೆ ಜಿಲ್ಲೆಯ ಪ್ರಮುಖ ಸಂಘ ಸಂಸ್ಥೆಗಳ ಪ್ರತಿನಿಧಿಗಳು ಭಾಗವಹಿಸಿದ್ದರು.

### ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಿ ನೊಂದಾಯಿಸಿಕೊಳ್ಳಿ

ಪ್ರಜಾಪ್ರಭುತ್ವದ ದಿನಾಚರಣೆಯ ಮಾನವ ಸರಪಳಿ ಕಾರ್ಯಕ್ರಮದಲ್ಲಿ ನೊಂದಾಯಿಸಿಕೊಳ್ಳಲು ಕ್ಯೂ-ಆರ್ ಕೋಡ್ ಬಿಡುಗಡೆ ಮಾಡಲಾಗಿದೆ. ಜಿಲ್ಲೆಯ ಸಂಘ ಸಂಸ್ಥೆಗಳ ಸದಸ್ಯರು, ಸರ್ಕಾರಿ ನೌಕರರು, ಅರೆ ಸರ್ಕಾರಿ ನೌಕರರು ಹಾಗೂ ಸಾರ್ವಜನಿಕರು ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಿ ಹೆಚ್ಚಿನ ಸಂಖ್ಯೆ ನೊಂದಾಯಿಸಿಕೊಳ್ಳುವಂತೆ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಮನವಿ ಮಾಡಿದರು.

# ಒಳ ಮೀಸಲಾತಿಗಾಗಿ ತಮಟೆ ಚಳುವಳಿ

» ಚಿತ್ರದುರ್ಗ

ಪರಿಶಿಷ್ಟ ಜಾತಿಗಳಲ್ಲಿನ ಉಪ ಜಾತಿಗಳಿಗೆ ಒಳ ಮೀಸಲಾತಿ ನೀಡುವ ಅಧಿಕಾರ ಆಯಾ ರಾಜ್ಯಗಳಿಗಿದೆ ಎಂದು ಸುಪ್ರೀಂಕೋರ್ಟ್ ಐತಿಹಾಸಿಕ ತೀರ್ಪು ನೀಡಿದ್ದರು ರಾಜ್ಯದ ಮುಖ್ಯಮಂತ್ರಿಸಿದ್ದರಾಮಯ್ಯನವರು ಅನುಷ್ಠಾನಕ್ಕೆ ತರಲು ವಿಳಂಭ ಮಾಡುತ್ತಿರುವುದನ್ನು ವಿರೋಧಿಸಿ ಕರ್ನಾಟಕ ದಲಿತ ಸಂಘರ್ಷ ಸಮಿತಿ(ಪ್ರೊ.ಬಿ.ಕೃಷ್ಣಪ್ಪ) ಸ್ಥಾಪಿತ ಜಿಲ್ಲಾ ಸಂಚಾಲಕ ಕೆಂಗುಂಟೆ ಜಯಣ್ಣ ನೇತೃತ್ವದಲ್ಲಿ ಜಿಲ್ಲಾಧಿಕಾರಿ ಕಚೇರಿ ಎದುರು ಗುರುವಾರ ತಮಟೆ ಚಳುವಳಿ ನಡೆಸಿ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಯಿತು. ಪ್ರವಾಸಿ ಮಂದಿರದಿಂದ ಮೆರವಣಿಗೆ ಮೂಲಕ ಹೊರಟ ದಲಿತರು ಸಂವಿಧಾನಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಸಲ್ಲಿಸಿ ನಂತರ ಒನಕೆ ಓಬವ್ವ ವೃತ್ತದಲ್ಲಿ ರಾಜ್ಯ ಸರ್ಕಾರದ ವಿರುದ್ದ ಧಿಕ್ಕಾರಗಳನ್ನು ಕೂಗಿದರು.

ಜಿಲ್ಲಾಧಿಕಾರಿ ಕಚೇರಿ ಎದುರು ಒಂದು ಗಂಟೆಗೂ ಹೆಚ್ಚು ಕಾಲ ನಡೆದ ತಮಟೆ ಚಳುವಳಿಯನ್ನುದ್ದೇಶಿಸಿ ಮಾತನಾಡಿದ ಕರ್ನಾಟಕ ದಲಿತ ಸಂಘರ್ಷ ಸಮಿತಿ ಪ್ರೊ.ಬಿ.ಕೃಷ್ಣಪ್ಪ ಸ್ಥಾಪಿತ ಜಿಲ್ಲಾ ಸಂಚಾಲಕ ಕೆಂಗುಂಟೆ ಜಯಣ್ಣ ಪ್ರೊ.ಬಿ.ಕೃಷ್ಣಪ್ಪನವರು ಒಳ ಮೀಸಲಾತಿಗಾಗಿ ಮೂವತ್ತು ವರ್ಷಗಳ ಕಾಲ ನಡೆಸಿದ ಹೋರಾಟಕ್ಕೆ ಸುಪ್ರೀಂಕೋರ್ಟ್ ತೀರ್ಪಿನಿಂದ ಜಯ ಸಿಕ್ಕಂತಾಗಿದೆ. ಹಾಗಾಗಿ ಒಳ ಮೀಸಲಾತಿಯನ್ನು ಜಾರಿಗೊಳಿಸಿ ಇಲ್ಲವಾದಲ್ಲಿ ಕುರ್ಚಿ ಖಾಲಿ ಮಾಡಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಗಡುವು ನೀಡಿದರು.




ಕರ್ನಾಟಕ, ಪಂಜಾಬ್, ಹರಿಯಾಣ, ಬಿಹಾರ, ತಮಿಳುನಾಡು, ಆಂಧ್ರ ಸೇರಿದಂತೆ ದೇಶದ ನಾನಾ ರಾಜ್ಯಗಳಲ್ಲಿ ಒಳ ಮೀಸಲಾತಿಗಾಗಿ ಸಾಕಷ್ಟು ಹೋರಾಟಗಳು ನಡೆದಫಲವಾಗಿ ಪರಿಶಿಷ್ಟ ಜಾತಿಯಲ್ಲಿನ ಉಪ ಜಾತಿಗಳಿಗೆ ಒಳ ಮೀಸಲಾತಿ ನೀಡುವ ಅಧಿಕಾರವನ್ನು ಸುಪ್ರೀಂಕೋರ್ಟ್ ಆಯಾ ರಾಜ್ಯಗಳಿಗೆ ವಹಿಸಿದ್ದರೂ ರಾಜ್ಯ ಸರ್ಕಾರ ಜಾಣ ಕುರುಡತನ ಪ್ರದರ್ಶಿಸುತ್ತಿರುವುದರಿಂದ ಮುಖ್ಯಮಂತ್ರಿ ನಿವಾಸಕ್ಕೆ ಮುತ್ತಿಗೆ ಹಾಕಲಾಗುವುದೆಂದು ಕೆಂಗುಂಟೆ ಜಯಣ್ಣ ಎಚ್ಚರಿಸಿದರು.

ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗಗಳ ಅಭಿವೃದ್ದಿಗೆ ಬಳಕೆಯಾಗಬೇಕಾಗಿದ್ದ 25 ಸಾವಿರ ಕೋಟಿ ರೂ.ಗಳನ್ನು ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಉಚಿತ ಗ್ಯಾರೆಂಟಿಗಳಿಗೆ ಬಳಸಿಎಸ್ಸಿ.ಎಸ್ಟಿಗಳಿಗೆದ್ರೋಹವೆಸಗಿರುವುದರಿಂದ ಸಮಾಜ ಕಲ್ಯಾಣ ಸಚಿವರು ನೈತಿಕ ಹೊಣೆ ಹೊತ್ತು ಕೂಡಲೆ ರಾಜಿನಾಮೆ ನೀಡಬೇಕೆಂದು ಒತ್ತಾಯಿಸಿದರು.ಕರ್ನಾಟಕ ದಲಿತ ಸಂಘರ್ಷ ಸಮಿತಿ ಪ್ರೊ.ಬಿ.ಕೃಷ್ಣಪ್ಪ ಸ್ಥಾಪಿತ ಜಿಲ್ಲಾ ಸಂಘಟನಾ ಸಂಚಾಲಕರುಗಳಾದ ನಾಗೇಂದ್ರಪ್ಪ, ಬಸವರಾಜ್, ಆರ್.ವೀರಭದ್ರಸ್ವಾಮಿ, ಹಿರಿಯ ಮುಖಂಡ ಶ್ರೀನಿವಾಸ್‌ಮೂರ್ತಿ, ಮೊಳಕಾಲ್ಮುರು ತಾಲ್ಲೂಕು ಸಂಚಾಲಕ ಕರಿಬಸಪ್ಪ, ಹಿರಿಯೂರು ತಾಲ್ಲೂಕು ಸಂಚಾಲಕ ರಘುನಾಥ್, ಚಳ್ಳಕೆರೆ ತಾಲ್ಲೂಕು ಸಂಚಾಲಕ ವಿಜಯಕುಮಾರ್, ಹೊಳಲ್ಕೆರೆ ತಾಲ್ಲೂಕು ಸಂಚಾಲಕ ಸುಂದರಮೂರ್ತಿ, ಜಿಲ್ಲಾ ಸಂಘಟನಾ ಸಂಚಾಲಕ ಶಿವಣ್ಣ ಮುತ್ತುಗದೂರು, ನವೀನ್ ಮದ್ದೇರು, ಗುಂಡಿಮಡು ಮಂಜಣ್ಣ, ವಿಶ್ವನಾಥಹಳ್ಳಿ ಮಂಜಣ್ಣ, ಆರ್.ರುದ್ರಮುನಿ, ಕರಿಯಪ್ಪ, ಚಿತ್ರದುರ್ಗ ತಾಲ್ಲೂಕು ಸಂಚಾಲಕ ಗುರುಮೂರ್ತಿ, ಡಿ.ಓ.ಮುರಾರ್ಜಿ ಸೇರಿದಂತೆ ನೂರಾರು ದಲಿತರು ತಮಟೆ ಚಳುವಳಿಯಲ್ಲಿ ಪಾಲ್ಗೊಂಡಿದ್ದರು.

### ಮಾಳಪ್ಪನಹಟ್ಟಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಕ್ಕಳಿಗೆ ಉಚಿತ ಆರೋಗ್ಯ ತಪಾಸಣೆ



» ಚಿತ್ರದುರ್ಗ

ಮಾಳಪ್ಪನಹಟ್ಟಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಭಾರತೀಯ ರೆಡ್‌ಕ್ರಾಸ್ ಸಂಸ್ಥೆ ಜಿಲ್ಲಾ ಶಾಖೆ, ನೆಹರು ಯುವ ಕೇಂದ್ರ, ರೋಟರಿ ಕ್ಲಬ್ ಚಿನ್ಮುಲಾದ್ರಿ, ಬಸಪ್ಪ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ, ನೀಲಕಂಠಯ್ಯ ಮೆಮೋರಿಯಲ್ ಪ್ಯಾರಾ ಮೆಡಿಕಲ್ ಕಾಲೇಜು ಸಹಯೋಗದೊಂದಿಗೆ ಮಕ್ಕಳಿಗೆ ಉಚಿತ ರಕ್ತದ ಗುಂಪಿನ ತಪಾಸಣೆ, ರಕ್ತದಾನ ಶಿಬಿರ, ಆರೋಗ್ಯ ಮತ್ತು ನೇತ್ರ ತಪಾಸಣೆ ನಡೆಸಲಾಯಿತು.

ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಮಾಳಪ್ಪನಹಟ್ಟಿ ಈಶ್ವರಪ್ಪನವರ ಎಪ್ಪತ್ತನೆ ಜನ್ಮದಿನದ ಅಂಗವಾಗಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಭಾರತೀಯ ರೆಡ್‌ಕ್ರಾಸ್ ಸಂಸ್ಥೆ ಉಪ ಸಭಾಪತಿ ಈ.ಅರುಣ್‌ಕುಮಾರ್ 41 ನೇ ಬಾರಿಗೆ ರಕ್ತದಾನ ಮಾಡಿದರು.ಭಾರತೀಯ ರೆಡ್‌ಕ್ರಾಸ್ ಸಂಸ್ಥೆ ಜಿಲ್ಲಾ ಕಾರ್ಯದರ್ಶಿ ಮಜಹರ್‌ಉಲ್ಲಾ, ಮಂಜುನಾಥ್ ಭಾಗವತ್, ಗಣೇಶಯ್ಯ, ನೆಹರು ಯುವ ಕೇಂದ್ರದ ಸುಹಾಸ್, ಗುರುಮೂರ್ತಿ, ಮಾರುತಿ, ಅಶೋಕ್, ಕಿರಣ್, ವೈದ್ಯರುಗಳಾದ ರವಿ, ನವೀನ್‌ಸಜ್ಜನ್, ಶಿಲ್ಪ, ರೂಪ ಇವರುಗಳು ಮಕ್ಕಳ ಆರೋಗ್ಯ ತಪಾಸಣೆ ನಡೆಸಿದರು. ಶಾಲೆಯ ಸಿಬ್ಬಂದಿ ವರ್ಗದವರು ಹಾಗೂ ಮಾಳಪ್ಪನಹಟ್ಟಿ ಗ್ರಾಮದ ಮುಖಂಡರುಗಳು ಈ ಸಂದರ್ಭದಲ್ಲಿ ಹಾಜರಿದ್ದರು.

### ಕಾನ್ಸ್‌ಟೇಬಲ್ ಹುದ್ದೆಯ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ

ದಾವಣಗೆರೆ: ದಾವಣಗೆರೆ ಜಿಲ್ಲೆಯಲ್ಲಿ ಖಾಲಿ ಇದ್ದ 40 ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಸೆಪ್ಟೆಂಬರ್.12 ರಂದು ಜಿಲ್ಲಾ ಕಚೇರಿ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ. ಅಭ್ಯರ್ಥಿಗಳು ಕಚೇರಿ ವೇಳೆಯಲ್ಲಿ ಬಂದು ಪರಿಶೀಲಿಸಬಹುದಾಗಿದೆ. ಅಥವಾ www.davangerepolice.karnataka.gov.in ವೆಬ್‌ಸೈಟ್ ಮೂಲಕ ವೀಕ್ಷಿಸಬಹುದಾಗಿದೆ ಎಂದು ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಉಮಾಪ್ರಶಾಂತ್ ತಿಳಿಸಿದ್ದಾರೆ.

### ಚಿತ್ರದುರ್ಗಕ್ಕೆ ಮಹಿಳಾ ಆಯೋಗದ ಅಧ್ಯಕ್ಷರ ಭೇಟಿ ಸೆ.14 ರಂದು

ಚಿತ್ರದುರ್ಗ: ಕರ್ನಾಟಕ ರಾಜ್ಯ ಮಹಿಳಾ ಆಯೋಗ ಅಧ್ಯಕ್ಷೆ ಡಾ.ನಾಗಲಕ್ಷ್ಮೀ ಚೌಧರಿಯವರು ಸೆ.14ರಂದು ಚಿತ್ರದುರ್ಗ ನಗರಕ್ಕೆ ಭೇಟಿ ನೀಡಲಿದ್ದಾರೆ. ಸೆ.14 ರ ಶನಿವಾರದಂದು ಬೆಳಿಗ್ಗೆ ಬೆಂಗಳೂರಿನಿಂದ ಹೊರಟು, ಬೆಳಿಗ್ಗೆ 10 ಗಂಟೆಗೆ ಚಿತ್ರದುರ್ಗ ನಗರದ ಜಿಲ್ಲಾ ಭಾಲಭವನದಲ್ಲಿ ಹಮ್ಮಿಕೊಂಡಿರುವ "ಕಾಡುಗೊಲ್ಲರಲ್ಲಿ ಹುಟ್ಟುಮುಟ್ಟು-ಅರಿವಿನ ಪಯಣ" ಕಾರ್ಯಕ್ರಮ ಉದ್ಘಾಟಿಸುವರು. ತದನಂತರ ಮಧ್ಯಾಹ್ನ 2.30ಕ್ಕೆ ಜಿಲ್ಲಾ ಆಸ್ಪತ್ರೆ ಹಾಗೂ 3.30ಕ್ಕೆ ಚಿತ್ರದುರ್ಗ ನಗರದ ಮಹಿಳಾ ಪೊಲೀಸ್ ಠಾಣೆಗೆ ಭೇಟಿ ನೀಡಲಿದ್ದಾರೆ ಎಂದು ಉಪನಿರ್ದೇಶಕಿ ಭಾರತಿ ಆರ್ ಬಣಕಾರ್ ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

# ಜಿಲ್ಲಾ ಪತ್ರಕರ್ತರ ಸಂಘದಿಂದ ಇಂದು ಪತ್ರಿಕಾ ದಿನಾಚರಣೆ

» ದಾವಣಗೆರೆ

ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಯೋಗದೊಂದಿಗೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದ ವತಿಯಿಂದ ನಾಳೆ ದಿನಾಂಕ 13ರ ಶುಕ್ರವಾರ ಮಧ್ಯಾಹ್ನ 3 ಗಂಟೆಗೆ ನಗರದ ಕುವೆಂಪು ಕನ್ನಡ ಭವನದಲ್ಲಿ ಪತ್ರಿಕಾ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಇದೇ ಸಂದರ್ಭದಲ್ಲಿ ಪತ್ರಿಕೆಯೊಂದರ ತಯಾರಿಕೆಯ ಹಿಂದಿರುವ ಎಲ್ಲಾ ಎಂಟು ವಿಭಾಗಗಳಿಂದ ಒಬ್ಬೊಬ್ಬರಂತೆ ಹಿರಿಯ ಶ್ರಮಿಕರಿಗೆ ಮಾಧ್ಯಮ ಮಾಣಿಕ್ಯ ಪ್ರಶಸ್ತಿ ಪ್ರದಾನ ಮಾಡಲಾಗುತ್ತದೆ. ಜೊತೆಗೆ, ದಾವಣಗೆರೆ ಜಿಲ್ಲೆಯ ಪತ್ರಕರ್ತರ ಪ್ರತಿಭಾನ್ವಿತ ಮಕ್ಕಳಿಗೆ ತಲಾ ಒಂದು ಸಾವಿರ ರೂ. ನಗದಿನೊಂದಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಗುತ್ತದೆ.

ಜೊತೆಗೆ, ಪತ್ರಕರ್ತ ಸಾಧಕರನ್ನು ಅಭಿನಂದಿಸಲಾಗುತ್ತದೆ. ದಾವಣಗೆರೆ ವಿಶ್ವವಿದ್ಯಾನಿಲಯದ ಬಿ.ಎಸ್.ಸಿ. ಪತ್ರಿಕ್ಕೆ ಹಿರಿಯ ಪತ್ರಕರ್ತರೂ ಆಗಿರುವ ಸಾಹಿತಿ ಬಿ.ಎನ್. ಮಲ್ಲೇಶ್ ಅವರ 'ಉತ್ತರೆ ಮಳೆ' ಕವಿತೆ ಆಯ್ಕೆಯಾಗಿದ್ದು, ಅವರೊಂದಿಗೆ, ದಾವಣಗೆರೆ ವಿಶ್ವವಿದ್ಯಾನಿಲಯದ ಗೌರವ ಡಾಕ್ಟರೇಟ್ ಪುರಸ್ಕಾರಕ್ಕೆ ಭಾಜನರಾಗಿರುವ ಹಿರಿಯ ಪತ್ರಿಕಾ ವ್ಯಂಗ್ಯಚಿತ್ರಕಾರ ಹೆಚ್.ಬಿ. ಮಂಜುನಾಥ್, ಜಿಲ್ಲಾ ವರದಿಗಾರರ ಕೂಟದ ನೂತನ ಅಧ್ಯಕ್ಷ 'ಕನ್ನಡಪ್ರಭ'ದ ಜಿಲ್ಲಾ ಹಿರಿಯ ಪತ್ರಕರ್ತ ನಾಗರಾಜ್ ಎಸ್. ಬಡದಾಳ್, ಚನ್ನಗಿರಿ ತಾಲ್ಲೂಕು ಕೆಯುಡಬ್ಲ್ಯುಜೆ ನೂತನ ಅಧ್ಯಕ್ಷ ವಿ. ಲಿಂಗರಾಜು ಅವರುಗಳನ್ನು ಗೌರವಿಸಲಾಗುತ್ತದೆ.

**ಪ್ರಶಸ್ತಿ ಪುರಸ್ಕೃತರು** : ಮುದ್ರಣ ಮಾಧ್ಯಮ ವಿಭಾಗದಿಂದ 'ಸಂಯುಕ್ತ ಕರ್ನಾಟಕ'ದ ಹಿರಿಯ ಉಪಸಂಪಾದಕ ಮಂಜುನಾಥ್ ಪಿ. ಕಾಡಜ್ಜಿ, ವಿದ್ಯುನ್ಮಾನ ಮಾಧ್ಯಮ ವಿಭಾಗದಿಂದ 'ಟಿವಿ9' ಜಿಲ್ಲಾ ಹಿರಿಯ ಪತ್ರಕರ್ತ ಬಸವರಾಜ್ ದೊಡ್ಮನಿ, ಛಾಯಾಗ್ರಹಣ ವಿಭಾಗದಲ್ಲಿ 'ಸುವರ್ಣ ಟೈಮ್ಸ್ ಆಫ್ ಕರ್ನಾಟಕ'ದ ವಿಜಯಕುಮಾರ್ ಜಾಧವ್, ಡಿಟಿಪಿ / ಡಿಸೈನರ್ ವಿಭಾಗದಲ್ಲಿ 'ವಿಜಯ ಕರ್ನಾಟಕ'ದ ಕೆ.ಜೆ. ದಾನೇಶ್, ಕಛೇರಿ ಸಿಬ್ಬಂದಿ ವಿಭಾಗದಲ್ಲಿ 'ಜನತಾವಾಣಿ'ಯ ಕರಡು ತಿದ್ದುಪಡಿಯ ಹೆಚ್. ನಿಂಗಪ್ಪ, ಜಾಹೀರಾತು ವಿಭಾಗದಲ್ಲಿ 'ಶ್ವೇತಾ ಅಡ್ವರ್ಟೈಸರ್' ಮಾಲೀಕ ಹೆಚ್.ಜಿ. ರುದ್ರೇಶಿ, ಮುದ್ರಣ ವಿಭಾಗದಲ್ಲಿ 'ನಗರವಾಣಿ'ಯ ಎಸ್.ಎನ್. ಮಹೇಶ್ ಕಾಶೀಪುರ, ಪತ್ರಿಕೆ ವಿತರಣಾ ವಿಭಾಗದಲ್ಲಿ ಹಿರಿಯ ಪತ್ರಿಕಾ ವಿತರಕ ಟಿ.ಕೆ. ದಿನೇಶ್ ಬಾಬು ಅವರುಗಳಿಗೆ ಮಾಧ್ಯಮ ಮಾಣಿಕ್ಯ ಪ್ರಶಸ್ತಿ ಪ್ರದಾನ ಮಾಡಲಾಗುತ್ತದೆ.

ದಾವಣಗೆರೆ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಿಂದ ಒಬ್ಬೊಬ್ಬರಂತೆ ಐವರು ಹಿರಿಯ ಪತ್ರಕರ್ತರನ್ನು ಮಾಧ್ಯಮ ಮಾಣಿಕ್ಯ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದ್ದು, ಹರಿಹರದಿಂದ 'ಪ್ರಜಾವಾಣಿ'ಯ ಹಿರಿಯ ಪತ್ರಕರ್ತರೂ ಆಗಿರುವ ನ್ಯಾಯವಾದಿ ಇನಾಯತ್ ಉಲ್ಲಾ, ಹೊನ್ನಾಳಿಯಿಂದ 'ಜನತಾವಾಣಿ'ಯ ಹೆಚ್.ಸಿ. ಮೃತ್ಯುಂಜಯ ಪಾಟೀಲ್, ಜಗಳೂರಿನ 'ನನ್ನ ಮಿತ್ರ' ಸಂಪಾದಕ ಅಣಬೂರು ಮಠದ ಕೊಟ್ರೇಶ್, ಚನ್ನಗಿರಿಯಿಂದ 'ವಿಜಯವಾಣಿ'ಯ ಟಿ.ಎನ್. ಜಗದೀಶ್, ನ್ಯಾಮತಿ ತಾಲ್ಲೂಕಿನಿಂದ 'ವಿಜಯ ಕರ್ನಾಟಕ'ದ ಎಂ.ಎಸ್. ಶಾಸ್ತ್ರಿ ಹೊಳಿಮಠ ಅವರುಗಳನ್ನು ಗೌರವಿಸಲಾಗುತ್ತದೆ.ಎಲ್ಲಾ ಪ್ರಶಸ್ತಿ ಪುರಸ್ಕೃತರನ್ನು ತಲಾ ಎರಡೂವರೆ ಸಾವಿರ ನಗದಿನೊಂದಿಗೆ, ಶಾಲು, ಹಾರ, ಪೇಟ ತೊಡಿಸಿ ಸ್ಮರಣಿಕೆಯೊಂದಿಗೆ ಪ್ರಶಸ್ತಿ ಪ್ರದಾನ ಮಾಡಿ, ಗೌರವಿಸಲಾಗುತ್ತದೆ.

**ಸಭಾಕಾರ್ಯಕ್ರಮ:** ಪ್ರಜಾಪಿತಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಶಿವಮೊಗ್ಗ ಶಾಖೆ ಸಂಚಾಲಕರೂ ಆಗಿರುವ ಹಿರಿಯ ಅಧ್ಯಾತ್ಮಿಕ ಚೇತನ ರಾಜಯೋಗಿನಿ ಬ್ರಹ್ಮಾಕುಮಾರಿ ಅನಸೂಯಾಜಿ ಅವರ ದಿವ್ಯ ಸಾನ್ನಿಧ್ಯದಲ್ಲಿ, ಲೋಕಸಭಾ ಸದಸ್ಯರಾದ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರು ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಲಿದ್ದಾರೆ.ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ್ ಅವರು 'ಮಾಧ್ಯಮ ಮಾಣಿಕ್ಯ ಪ್ರಶಸ್ತಿಯನ್ನು, ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಅವರು 'ಸಾಧಕರಿಗೆ ಗೌರವಾರ್ಪಣೆ', ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು 'ಪ್ರತಿಭಾ ಪುರಸ್ಕಾರ' ಪ್ರದಾನ ಮಾಡಲಿದ್ದಾರೆ. ಪತ್ರಿಕೋದ್ಯಮದ ಕುರಿತಂತೆ ಕೊಪ್ಪಳ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ. ಬಿ.ಕೆ. ರವಿ ಅವರು ವಿಶೇಷ ಉಪನ್ಯಾಸ ನೀಡಲಿದ್ದಾರೆ.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಇ.ಎಂ. ಮಂಜುನಾಥ ಅಧ್ಯಕ್ಷತೆ ವಹಿಸಲಿದ್ದು, ದಾವಣಗೆರೆ-ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ದಿನೇಶ್ ಕೆ. ಶೆಟ್ಟಿ ಅವರನ್ನು ಸನ್ಮಾನಿಸಲಾಗುತ್ತದೆ. ಕೆಯುಡಬ್ಲ್ಯುಜೆ ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ್, ಜಿಲ್ಲಾ ವಾರ್ತಾಧಿಕಾರಿ ಬಿ. ಧನಂಜಯಪ್ಪ, ಕೆಯುಡಬ್ಲ್ಯುಜೆ ರಾಜ್ಯ ಕಾರ್ಯದರ್ಶಿ ನಿಂಗಪ್ಪ ಚಾವಡಿ ಮುಖ್ಯ ಅತಿಥಿಗಳಾಗಿದ್ದಾರೆ.

**ಸರ್ವಸದಸ್ಯರಮಹಾಸಭೆ:** ಕಾರ್ಯಕ್ರಮಕ್ಕೂ ಮೊದಲು ಮಧ್ಯಾಹ್ನ 2 ಗಂಟೆಗೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದ 2023-24ನೇ ಸಾಲಿನ ವಾರ್ಷಿಕ ಸರ್ವ ಸದಸ್ಯರ ಮಹಾಸಭೆ ಏರ್ಪಾಡಾಗಿದ್ದು, ಪ್ರಧಾನ ಕಾರ್ಯದರ್ಶಿ ಎ. ಫಕ್ರುದ್ದೀನ್ ವಾರ್ಷಿಕ ವರದಿ ಮಂಡಿಸಲಿದ್ದಾರೆ. ಖಜಾಂಚಿ ಎನ್.ವಿ. ಬದರಿನಾಥ್ ಲೆಕ್ಕಪತ್ರ ಮಂಡಿಸುವರು.

## ಫಾಸ್ಟ್ ನ್ಯೂಸ್

### ಅಪ್ರೆಂಟೀಸ್ ತರಬೇತಿಗಾಗಿ ಅರ್ಜಿ

» ದಾವಣಗೆರೆ

ಹೆಚ್.ಎ.ಎಲ್ ಬೆಂಗಳೂರು ಇವರು ಐ.ಟಿ.ಐ. ತೇರ್ಗಡೆ ಹೊಂದಿದ ಅಭ್ಯರ್ಥಿಗಳಿಂದ ಅಪ್ರೆಂಟೀಸ್ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ನಮೂನೆಯನ್ನು ದಾವಣಗೆರೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ಪಡೆದುಕೊಂಡು, ಭರ್ತಿ ಮಾಡಿದ ಅರ್ಜಿಯನ್ನು ಅಕ್ಟೋಬರ್ 5 ರೊಳಗಾಗಿ ಕಚೇರಿಗೆ ಸಲ್ಲಿಸಬೇಕು. ಅಭ್ಯರ್ಥಿಗಳು http://apprenticeshipindia.gov.in ಈ ವೆಬ್‌ಸೈಟ್‌ನಲ್ಲಿ ಅಪ್ರೆಂಟೀಸ್‌ಗಾಗಿ ನೋಂದಾಯಿಸಿ, ಕಡ್ಡಾಯವಾಗಿ ನೋಂದಣಿ ಸಂಖ್ಯೆಯನ್ನು ತರತಕ್ಕದ್ದು, ಹೆಚ್ಚಿನ ಮಾಹಿತಿಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಜಿಲ್ಲಾ ಆಡಳಿತ ಭವನ, ದಾವಣಗೆರೆ ದೂ.ಸಂ:08192-259446,7406323294 ಸಂಪರ್ಕಿಸಲು ಉದ್ಯೋಗಾಧಿಕಾರಿ ರವೀಂದ್ರ ತಿಳಿಸಿದ್ದಾರೆ.

### ಗ್ರಂಥ ಲೋಕಾರ್ಪಣೆ

» ಚಿತ್ರದುರ್ಗ

ಶರಣ ಸಾಹಿತ್ಯ ಪರಿಷತ್ತು, ಚಿತ್ರದುರ್ಗ ಜಿಲ್ಲಾ ಘಟಕ, ರೋಟರಿ ಕ್ಲಬ್ ಫೋರ್ಟ್ ಚಿತ್ರದುರ್ಗ ಮತ್ತು ಮುಕ್ತ ವೇದಿಕೆ,ಸಂಯುಕ್ತಾಶ್ರಯದಲ್ಲಿ ಡಾ.ಜಿ.ಎನ್.ಮಲ್ಲಿಕಾರ್ಜುನಪ್ಪ ಇವರ ಸತ್ಯವ್ರತಿಯ ಸ್ವಪ್ನಪದಿಗಳುಗ್ರಂಥಲೋಕಾರ್ಪಣೆಕಾರ್ಯಕ್ರಮವು ಸೆ. 13ರ ಶುಕ್ರವಾರ ಸಂಜೆ 5ಕ್ಕೆ ನಗರದ ಮೆದೇಹಳ್ಳಿ ರಸ್ತೆಯ ಮರುಳಪ್ಪ ಬಡಾವಣೆಯ 2ನೇ ಮುಖ್ಯರಸ್ತೆಯ ಆದಿಶೇಷ ರೋಟರಿ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ. ಸಮಾರಂಭದ ಅಧ್ಯಕ್ಷತೆಯನ್ನು ನಿವೃತ್ತ ಪ್ರಾಧ್ಯಾಪಕರು ಮತ್ತು ಜಾನಪದ ವಿದ್ವಾಂಸರಾದ ಡಾ. ಮೀರಾಸಾಬಿಹಳ್ಳಿ ಶಿವಣ್ಣ ವಹಿಸಲಿದ್ದಾರೆ. ಗ್ರಂಥಲೋಕಾರ್ಪಣೆಯನ್ನು ಹಂಪಿ ಕನ್ನಡ ವಿಶ್ವ ವಿದ್ಯಾಲಯದ ಕುಲಪತಿಗಳಾದ ಡಾ.ಡಿ.ವಿ.ಪರಮಶಿವಮೂರ್ತಿ ಮಾಡಲಿದ್ದಾರೆ. ಗ್ರಂಥಾವಲೋಕನವನ್ನು ವಿಶ್ರಾಂತ ಪ್ರಾಂಶುಪಾಲರು ಮತ್ತು ಇತಿಹಾಸ ಸಂಶೋಧಕರಾದ ಡಾ.ಬಿ.ರಾಜಶೇಖರಪ್ಪ ಮಾಡಲಿದ್ದಾರೆ. ವಿಶೇಷ ಅತಿಥಿಗಳಾಗಿ ರೋಟರಿ ಕ್ಲಬ್, ಚಿತ್ರದುರ್ಗ ಫೋರ್ಟ್‌ನ ಅಧ್ಯಕ್ಷರಾದ ರೊ.ಚೇತನ್ ಬಾಬು, ಡಾ. ಎಸ್.ವೈ. ಸೋಮಶೇಖರ್ ನಿರ್ದೇಶಕರು ಶೈಕ್ಷಣಿಕ, ಕನ್ನಡ ವಿಶ್ವವಿದ್ಯಾನಿಲಯ, ಹಂಪಿ ರೊ. ವೆಂಕಟೇಶ್ ಜಿ.ಕೆ. ಅಧ್ಯಕ್ಷರು, ರೋಟರಿ ಫೋರ್ಟ್ ಟ್ರಸ್ಟ್ ಚಿತ್ರದುರ್ಗ ಡಾ. ಕೆ.ಎಂ. ವೀರೇಶ್ ಅಧ್ಯಕ್ಷರು, ಶರಣ ಸಾಹಿತ್ಯ ಪರಿಷತ್ತು, ಚಿತ್ರದುರ್ಗ ಜಬಿವುಲ್ಲಾ ಎಂ ಸಾಹಿತಿಗಳು ಮತ್ತು ರೇಖಾ ಚಿತ್ರಕಾರರು, ಮೊಳಕಾಲ್ಮೂರು ರೊ. ರವೀಂದ್ರ ಎಂ.ಕೆ.ಪ್ರೊ. ಸಿ. ಬಸವರಾಜಪ್ಪ ವಿಶ್ರಾಂತ ಪ್ರಾಂಶುಪಾಲರು ಮತ್ತು ಸಂಚಾಲಕರು, ಮುಕ್ತ ವೇದಿಕೆ, ಚಿತ್ರದುರ್ಗ,ಚೇತನ್ ಕಣಬೂರು ಅಕ್ಷರ ಮಂಟಪ ಪ್ರಕಾಶನ, ಹಂಪಿನಗರ, ಬೆಂಗಳೂರು ಡಾ. ಜಿ. ಎನ್.ಮಲ್ಲಿಕಾರ್ಜುನಪ್ಪ ವಿಶ್ರಾಂತ ಪ್ರಾಂಶುಪಾಲರು ಮತ್ತು ಕೃತಿಕಾರರು ಭಾಗವಹಿಸಲಿದ್ದಾರೆ.

### ಗಣೇಶನನ್ನು ತಲೆ ಮೇಲೆ ಹೊತ್ತುಕೊಂಡು ಸಂಭ್ರಮಿಸಿದ ಮಕ್ಕಳು



» ಹೊಸದುರ್ಗ

ಪಟ್ಟಣದ ಎಸ್.ನಿಜಲಿಂಗಪ್ಪ ಶಿಕ್ಷಣ ಸಂಸ್ಥೆಯ ವತಿಯಿಂದ ಶಾಲಾ ಆವರಣದಲ್ಲಿ ಪ್ರತಿಷ್ಠಾಪಿಸಲಾಗಿದ್ದ ಶ್ರೀ ಗಣೇಶ ಮೂರ್ತಿಯನ್ನು ವಿಸರ್ಜನೆ ಮಾಡಲಾಯಿತು. ಈ ಸಂಧರ್ಬದಲ್ಲಿ ಶಾಲಾ ಮಕ್ಕಳು ಗಣೇಶನನ್ನು ತಲೆಯ ಮೇಲೆ ಹೊತ್ತುಕೊಂಡು ಸಂಭ್ರಮಿಸಿ ಸಂತಸ ಹಂಚಿಕೊಂಡರು. ಸಂಸ್ಥೆಯ ಕಾರ್ಯದರ್ಶಿ ಕೆ.ಎಸ್.ಕಲ್ಮಠ್. ಅಧ್ಯಕ್ಷ ಎಂ.ಶಿವಲಿಂಗಪ್ಪ, ಅಕಾಡಮಿ ಡೈರೆಕ್ಟರ್ ಎಂ.ಬಿ.ತಿಪ್ಪೇಸ್ವಾಮಿ ಶಿಕ್ಷಕ ವೀರೇಶ್ ಸೇರಿದಂತೆ ಶಾಲಾ ಆಡಳಿತ ಮಂಡಳಿ, ಸಿಬ್ಬಂಧಿಗಳು ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು ವಿಸರ್ಜನೆಗೂ ಮುನ್ನ ಶ್ರೀ ವಿನಾಯಕನಿಗೆ ವಿಶೇಷ ಪೂಜೆ ಸಲ್ಲಿಸಿ ನಂತರ ಪ್ರಸಾದ ವಿನಿಯೋಗ ಮಾಡಲಾಯಿತು.

### ಹೊಸದುರ್ಗ ಹಲವೆಡೆ ಇಂದು ವಿದ್ಯುತ್ ವ್ಯತ್ಯಯ

» ಹೊಸದುರ್ಗ

ಸೆ.13 ರಂದು ಶುಕ್ರವಾರ ರಸ್ತೆ ಅಗಲೀಕರಣ ಮತ್ತು ಒಳ ಚರಂಡಿ ನಿರ್ವಹಣಾ ಕಾಮಗಾರಿ ನಿರ್ವಹಿಸುತ್ತಿರುವುದರಿಂದ ಬೆಳಿಗ್ಗೆ 11.30 ಗಂಟೆಯಿಂದ ಸಂಜೆ 6 ಗಂಟೆಯವರೆಗೂ ಹೊಸದುರ್ಗ 66/11 ಕೆ.ವಿ ವಿದ್ಯುತ್ ಕೇಂದ್ರದಿಂದ ಸರಬರಾಜು ಆಗುವ ಹೊಸದುರ್ಗ ಪಟ್ಟಣದ ಸಿದ್ದರಾಮೇಶ್ವರ ನಗರ,ರಾಘವೇಂದ್ರ ಬಡಾವಣೆ,ಶಿವಲಿಂಗಪ್ಪ ಬಡಾವಣೆ, ಸಿದ್ದೇಶ್ವರ ಲೇಔಟ್,ಕೈಗಾರಿಕಾ ಪ್ರದೇಶ,ಕನಕ ಬಡಾವಣೆ,ಯಲಕ್ಕಪ್ಪನಹಟ್ಟಿ, ಶಿವನೇಕಟ್ಟೆ ಗ್ರಾಮ ಮತ್ತು ಕಂಗುವಳ್ಳಿ ಮತ್ತು ಬೋಕಿಕೆರೆ ಪಂಚಾಯಿತಿಯ ಎಲ್ಲಾ ಗ್ರಾಮಗಳು ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದ್ದು ಸಾರ್ವಜನಿಕರು ಸಹಕರಿಸಬೇಕೆಂದು ಸಹಾಯಕ ಕಾರ್ಯನಿರ್ವಹಕ ಇಂಜಿನಿಯರ್ ಕಿರಣ್‌ರೆಡ್ಡಿ ಕೆ. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

**ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಎಚ್ಚರಿಕೆ**

# ತ್ಯಾಜ್ಯ ನೀರು ನಿರ್ವಹಣೆ: ನಿರ್ಲಕ್ಷ್ಯ ತೋರುವ ಅಧಿಕಾರಿಗಳ ವಿರುದ್ಧ ಎಫ್‌ಐಆರ್ ದಾಖಲು

» ಚಿತ್ರದುರ್ಗ

ತ್ಯಾಜ್ಯ ನೀರು ನಿರ್ವಹಣೆಯಲ್ಲಿ ನಿರ್ಲಕ್ಷ್ಯ ತೋರುವ ಅಧಿಕಾರಿಗಳ ವಿರುದ್ದ ಬೇಜವಾಬ್ದಾರಿತನ ಹಾಗೂ ಸಾರ್ವಜನಿಕರಿಗೆ ತೊಂದರೆ ನೀಡಿದ ಕಾರಣಕ್ಕಾಗಿ ಎಫ್.ಐ.ಆರ್ ದಾಖಲಿಸುವುದಾಗಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಎಚ್ಚರಿಕೆ ನೀಡಿದರು.

ಕೇಂದ್ರ ಹಾಗೂ ರಾಜ್ಯ ಪುರಸ್ಕೃತ ಯೋಜನೆಗಳಡಿ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಅನುಷ್ಠಾನಗೊಳಿಸುತ್ತಿರುವ ಕುಡಿಯುವ ನೀರು ಸರಬರಾಜು ಮತ್ತು ಒಳ ಚರಂಡಿ ಕಾಮಗಾರಿಗಳ ಕುರಿತು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜರುಗಿದ ಜಿಲ್ಲಾ ಮಟ್ಟದ ಸಲಹಾ ಮತ್ತು ನಿರ್ವಹಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ಚಿತ್ರದುರ್ಗ ನಗರದ ಒಳ ಚರಂಡಿ ಜಾಲದ ಮಾರ್ಗಗಳ ನಕ್ಷೆಯನ್ನು ಸಿದ್ದಪಡಿಸಬೇಕು. ವೆಟ್‌ವಲ್(ತೇವ ಬಾವಿ)ಗಳ ಸಾಮರ್ಥ್ಯಕ್ಕೆ ತಕ್ಕಂತೆ ನಗರದಲ್ಲಿನ ಕಲುಷಿತ ನೀರು ವೆಟ್‌ವೆಲ್ ಸೇರುತ್ತಿಲ್ಲ. ಇದರ ಬದಲಾಗಿ ನಗರದ ರಸ್ತೆಗಳ ಮೇಲೆಯ ಚರಂಡಿ ನೀರು ಹರಿದಾಡುವ ಪ್ರಸಂಗ ಎದುರಾಗಿದೆ. ಇದು ಸಾರ್ವಜನಿಕ ಸ್ವಾಸ್ಥ್ಯಕ್ಕೆ ಕಂಟಕವಾಗುತ್ತದೆ. ವೆಟ್‌ವೆಲ್ ನಿರ್ಮಿಸುವ ವೇಳೆಯಲ್ಲಿಯೇ ತ್ಯಾಜ್ಯ ನೀರು ವೆಟ್‌ವೆಲ್ ಸೇರುವಂತೆ ಕೊಳಚೆ ನೀರು ಸಂಪರ್ಕ ಜಾಲವನ್ನು ಅಭಿವೃದ್ಧಿ ಪಡಿಸಬೇಕಿತ್ತು. ಆದರೆ ನಗರ ಸಭೆ ಹಾಗೂ ಒಳಚರಂಡಿ ಮಂಡಳಿಯ ಸಮನ್ವಯತೆ ಕೊರತೆಯಿಂದ ವೆಟ್‌ವೆಲ್ ಹಾಗೂ ತ್ಯಾಜ್ಯ ನೀರು ಶುದ್ಧೀಕರಣ ಘಟಕಗಳಿಗೆ ಕೊಳಚೆ ನೀರು ಸೇರುತ್ತಿಲ್ಲ. ವಾರ್ಡ್‌ಗಳ ತ್ಯಾಜ್ಯ ನೀರು ರಸ್ತೆ ಹಾಗೂ ಮನೆಗಳಿಗೆ ನುಗ್ಗುತ್ತಿರುವ ಬಗ್ಗೆ ನಗರಸಭೆ ಸದಸ್ಯರು ಹಾಗೂ ಸಾರ್ವಜನಿಕರು ದೂರು ನೀಡುತ್ತಾರೆ. ನಗರಸಭೆ ಅಧಿಕಾರಿಗಳು ತಾತ್ಕಾಲಿಕ ಪರಿಹಾರ ನೀಡಿ ಜವಾಬ್ದಾರಿಯಿಂದ ನುಣುಚಿಕೊಳ್ಳುತ್ತಾರೆ. ಈ ರೀತಿಯ ವರ್ತನೆಯಿಂದ ಸಮಸ್ಯೆ ಬಗೆ ಹರಿಯುವುದಿಲ್ಲ. ಸಂಬಂಧ ಪಟ್ಟ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ ಸಮಸ್ಯೆಗೆ ಶಾಶ್ವತ ಪರಿಹಾರ ಒದಗಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗಳಿಗೆ ಸೂಚಿಸಿದರು.

ರಾಜ ಕಾಲುವೆ ಸೇರಿದಂತೆ ಇತರೆ ಕಾಲುವೆ ಪ್ರದೇಶಗಳಲ್ಲಿ ನಗರಸಭೆಯಿಂದ ಸಮೀಕ್ಷೆ ನಡೆಸಿ ನಿಯಮಾನುಸಾರ ಬಫರ್ ಜೋನ್‌ಗಳನ್ನು ಗುರುತಿಸಬೇಕು. ಜಲಮೂಲಗಳ ಬಫರ್ ಜೋನ್‌ಗಳಲ್ಲಿ ಯಾವುದೇ ಕಟ್ಟಡ ನಿರ್ಮಾಣಗಳಿಗೆ ಅನುಮತಿ ನೀಡಬಾರದು. ಒಂದು ವೇಳೆ ಅನುಮತಿ ನೀಡಿದರೆ ಅಂತಹ ಅಧಿಕಾರಿಗಳ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸುವುದಾಗಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದರು.

ಅಮೃತ್ ಯೋಜನೆಯಡಿ, ಮೊಳಕಾಲ್ಮೂರು, ನಾಯಕನಹಟ್ಟಿ, ಹೊಳಲ್ಕೆರೆ ಪಟ್ಟಣದಲ್ಲಿ ಮೇಲ್ಮಟ್ಟದ ಜಲಸಂಗ್ರಹಾಗಾರಗಳನ್ನು ನಿರ್ಮಿಸಲು ಅವಶ್ಯಕತೆ ಇರುವ ಸ್ಥಳವನ್ನು ಮುಖ್ಯಾಧಿಕಾರಿಗಳು ಗುರುತಿಸಿ ಹಸ್ತಾಂತರಿಸುವ ಕೆಲಸ ಮಾಡಬೇಕು. ಈಗಾಗಲೇ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ಪೂರ್ಣಗೊಂಡು ಪಾಲನೆ ಮತ್ತು ನಿರ್ವಹಣೆಯ ಅವಧಿ ಮುಗಿದ ಕಾಮಗಾರಿಗಳನ್ನುಸಂಬಂಧಪಟ್ಟನಗರಸಭೆ ಹಾಗೂ ಪಟ್ಟಣ ಪಂಚಾಯಿತಿಗಳು ಹಸ್ತಾಂತರ ಮಾಡಿಕೊಳ್ಳುವಂತೆ ಜಿಲ್ಲಾಧಿಕಾರಿಗಳು ಸೂಚಿಸಿದರು.

**ಮಲ್ಲಾಪುರ ಕೆರೆ ದಂಡೆ ಮರು ಸಮೀಕ್ಷೆ :** ಸಣ್ಣ ನೀರಾವರಿ ಇಲಾಖೆ ವ್ಯಾಪ್ತಿಯಲ್ಲಿನ ಚಿತ್ರದುರ್ಗ ನಗರಕ್ಕೆ ಹೊಂದಿಕೊಂಡಿರುವ ಮಲ್ಲಾಪುರ ಕೆರೆ ದಂಡೆ ಮರು ಸಮೀಕ್ಷೆ ಕಾರ್ಯ ಕೈಗೊಳ್ಳುವಂತೆ ಭೂಮಾಪನ ಇಲಾಖೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ನಿರ್ದೇಶನ ನೀಡಿದರು.

ಮಲ್ಲಾಪುರ ಕೆರೆ ಏರಿಯನ್ನು ಎತ್ತರಿಸಲಾಗಿದೆ. ಇದರಿಂದ ಕೆರೆಯಲ್ಲಿ ನೀರಿನಸಂಗ್ರಹಪ್ರಮಾಣಹೆಚ್ಚಾಗಿಜನವಸತಿ ಪ್ರದೇಶಗಳಿಗೆ ತೊಂದರೆಯಾಗಿದೆ. ತಾತ್ಕಾಲಿಕವಾಗಿ ಕೆರೆಯಿಂದ 2 ಅಡಿ ನೀರು ಹೊರ ಹರಿಸಲು ಸಭೆಯಲ್ಲಿ ಅನುಮತಿಸಲಾಯಿತು.

ಸಿರಿಗೆರೆ, ಭರಮಸಾಗರ ನೀರು ಸರಬರಾಜು ನಿರ್ವಹಣೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಹಸ್ತಾಂತರಿಸಿಕೊಳ್ಳುವಂತೆ ಹಾಗೂ ಬಾಕಿ ಉಳಿಸಿಕೊಂಡಿರುವ ನಿರ್ವಹಣೆ ವೆಚ್ಚವನ್ನು ಪಾವತಿಸಲು ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಸೂಚಿಸಿದರು.

ಕುಡಿಯುವ ನೀರು ಸರಬಾರಾಜು ಕಾಮಗಾರಿಗಳನ್ನು ಕೈಗೊಳ್ಳಲು ಅನುಮತಿ ನೀಡುವ ಕುರಿತು ಪ್ರತ್ಯೇಕವಾಗಿ ರಾಷ್ಟ್ರೀಯ ಹೆದ್ದಾರಿ ಹಾಗೂ ರೈಲ್ವೇ ಇಲಾಖೆ ಅಧಿಕಾರಿಗಳ ಸಭೆಯನ್ನು ಶುಕ್ರವಾರ ಕರೆಯುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ನಿರ್ದೇಶಿಸಿದರು.

ಸಭೆಯಲ್ಲಿ ಚಿತ್ರದುರ್ಗ ನಗರಸಭೆ ಅಧ್ಯಕ್ಷೆ ಸುಮಿತಾ ರಘು, ನಾಯಕನಹಟ್ಟಿ ಪಟ್ಟಣ ಪಂಚಾಯಿತಿ ಅಧ್ಯಕ್ಷೆ ಟಿ.ಮಂಜುಳ ಶ್ರೀಕಾಂತ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಹೇಂದ್ರ ಕುಮಾರ್, ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಕಾರ್ಯಪಾಲಕ ಇಂಜಿನಿಯರ್ ಅನಿಲ್ ಕುಮಾರ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹೇಮಂತ ಕುಮಾರ್, ಚಿತ್ರದುರ್ಗ ನಗರ ಸಭೆ ಆಯುಕ್ತೆ ರೇಣುಕಾ.ಎಂ ಸೇರಿದಂತೆ ಇತರೆ ನಗರಸಭೆಗಳ ಪೌರಾಯುಕ್ತರು ಹಾಗೂ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿಗಳು ಭಾಗವಹಿಸಿದ್ದರು.



---

# ಬಯಲಾಟ ಅತ್ಯಂತ ಪ್ರಾಚೀನ ರಂಗಕಲೆ

» ಚಿತ್ರದುರ್ಗ

ಕರ್ನಾಟಕ ಬಯಲಾಟ ಅಕಾಡೆಮಿ ವತಿಯಿಂದ ಸ್ಟೇಡಿಯಂ ಸಮೀಪವಿರುವ ಬಾಲಭವನದಲ್ಲಿ ಬಯಲಾಟ ಕಲಾವಿದರ ಜೊತೆ ಗುರುವಾರ ಸಂವಾದ ಏರ್ಪಡಿಸಲಾಗಿತ್ತು.

ಕರ್ನಾಟಕ ಬಯಲಾಟ ಅಕಾಡೆಮಿ ಅಧ್ಯಕ್ಷ ಡಾ.ದುರ್ಗಾದಾಸ್ ಸಂವಾದ ಉದ್ದೇಶಿಸಿ ಮಾತನಾಡುತ್ತ ಬಯಲಾಟ ಅತ್ಯಂತ ಪ್ರಾಚೀನ ರಂಗಕಲೆ. ಯಕ್ಷಗಾನ ಕರಾವಳಿಗೆ ಸೀಮಿತವಾಗಿದೆ. ಬಯಲಾಟಕ್ಕಿಂತ ಯಕ್ಷಗಾನ ಭಿನ್ನವಾದುದು. ಬಯಲಾಟದಲ್ಲಿರುವ ವಾದ್ಯಗಳೆ ಬೇರೆ, ಯಕ್ಷಗಾನದಲ್ಲಿನ ವಾದ್ಯಗಳೆ ಬೇರೆ, ಒಟ್ಟಾರೆ ಬಯಲಾಟಕ್ಕೂ ಯಕ್ಷಗಾನಕ್ಕೂ ವ್ಯತ್ಯಾಸವಿದೆ ಎಂದು ಹೇಳಿದರು.

ಬಯಲಾಟವೆಂದರೆ ಒಂದು ಕೋಣೆಯಲ್ಲಿ ಆಡುವುದಲ್ಲ. ಬಯಲಿನಲ್ಲಿ ಜನ ಇರುವ ಕಡೆ ಪ್ರದರ್ಶನವಾಗುವುದಕ್ಕೆ ಬಯಲಾಟ ಎಂಬ ಹೆಸರು ಬಂದಿದೆ. ಸಾಮಾಜಿಕ ಪುರಾಣದ ತಿಳುವಳಿಕೆ, ಸಂಗೀತ, ಕುಣಿತ, ವಿನಯ, ಶೃಂಗಾರವನ್ನು ಬಯಲಾಟ ಕಲಿಸುತ್ತದೆ. ಬಯಲಾಟ ಕಲಾವಿದರನ್ನು ಎತ್ತಿನಿಲ್ಲಿಸಿದೆಯಾದರೂ ಬಯಲಾಟ ಕುರಿತು ಬರೆಯುವ ಮಾತನಾಡುವ ವಿದ್ವಾಂಸರುಗಳು ಕಡಿಮೆಯಾಗಿದ್ದಾರೆ. ಹಾಗಾಗಿ ಬಯಲಾಟ ಕಲಾವಿದರ ಬದುಕು ಸುಧಾರಣೆ, ಸಾಧಕ ಬಾಧಕಗಳ ಕುರಿತು ಚರ್ಚಿಸಿ ಸರ್ಕಾರದ ಗಮನ ಸೆಳೆಯುವುದಕ್ಕಾಗಿ ನಿಮ್ಮಗಳ ಜೊತೆ ಸಂವಾದ ನಡೆಸುತ್ತಿರುವ ಉದ್ದೇಶ ಎಂದು ತಿಳಿಸಿದರು.

ವಿಶ್ರಾಂತ ಪ್ರಾಚಾರ್ಯರು ಹಾಗೂ ಇತಿಹಾಸ ಸಂಶೋಧಕರಾದ ಡಾ.ಬಿ.ರಾಜಶೇಖರಪ್ಪ ಬಯಲಾಟ ಕಲಾವಿದರನ್ನುದ್ದೇಶಿಸಿ ಮಾತನಾಡುತ್ತ ಬಯಲಾಟ ಕಲಾವಿದರೆಂದರೆ ನಿರ್ಲಕ್ಷಿಸಬೇಕಿಲ್ಲ. ಸ್ವಾಭಿಮಾನದ ಬದುಕು ನಿಮ್ಮದು. ಸರ್ಕಾರ ಕೂಡ ನಿಮ್ಮ ಕಲೆಯನ್ನು ಉಳಿಸಿ ಬೆಳೆಸುವುದಕ್ಕಾಗಿ ಪ್ರೋತ್ಸಾಹ ನೀಡುತ್ತಿದೆ. ಬಯಲಾಟ ಎನ್ನುವುದು ಪ್ರಾಚೀನ ಕಲೆಯಾಗಿರುವುದರಿಂದ ಮುಂದಿನ ಪೀಳಿಗೆಗೆ ಈ ಕಲೆಯನ್ನು ಉಳಿಸಿ ಬೆಳೆಸುವ ಹೊಣೆಗಾರಿಕೆ ನಿಮ್ಮ ಮೇಲಿದೆ ಎಂದರು.

ಬಯಲಾಟ ಇತ್ತೀಚಿನ ದಿನಗಳಲ್ಲಿ ಕಡಿಮೆಯಾಗುತ್ತಿರುವುದು ಬೇಸರದ ಸಂಗತಿ. ಕರ್ನಾಟಕ ಬಯಲಾಟ ಅಕಾಡೆಮಿ ಕಲಾವಿದರ ಬದುಕು, ಭವಣೆಯನ್ನು ಆಲಿಸಿ ಸರ್ಕಾರದಿಂದ ಸಿಗಬೇಕಾದ ಪ್ರೋತ್ಸಾಹ, ನೆರವು ಕಲ್ಪಿಸುವಲ್ಲಿ ಪ್ರಾಮಾಣಿಕವಾಗಿ ಪ್ರಯತ್ನ ಮಾಡುತ್ತಿದೆ ಎಂದು ನುಡಿದರು.ಶ್ರೀಮತಿ ಯಶೋಧ ಡಾ.ಬಿ.ರಾಜಶೇಖರಪ್ಪಸಂವಾದದಲ್ಲಿಭಾಗವಹಿಸಿ ಮಾತನಾಡುತ್ತ ನಾನು ಕಲಾವಿದೆಯಲ್ಲದಿದ್ದರೂ ಏಕಪಾತ್ರಾಭಿಯನ ಪ್ರದರ್ಶಿಸಿದ್ದೇನೆ. ಬಯಲಾಟ ಕಲಾವಿದರು ತಮ್ಮ ಹಿರಿಯರಿಂದ ಬಂದ ಕಲೆಯನ್ನು ಮುಂದುವರೆಸಿಕೊಂಡು ಹೋಗುತ್ತಿರುವುದು ನಿಜಕ್ಕೂ ಸಂತೋಷದ ಸಂಗತಿ. ಸರ್ಕಾರ ಇಂತಹ ಕಲೆಯನ್ನು ಉಳಿಸಿ ಕಲಾವಿದರಿಗೆ ಶಕ್ತಿ ತುಂಬಬೇಕಿದೆ ಎಂದು ಸಲಹೆ ನೀಡಿದರು.ಕರ್ನಾಟಕ ಯಕ್ಷಗಾನ ಬಯಲಾಟ ಅಕಾಡೆಮಿ ಮಾಜಿ ಸದಸ್ಯ ಡಾ.ಬಿ.ಎಂ.ಗುರುನಾಥ್ ಮಾತನಾಡಿ ಕರಾವಳಿ ಪ್ರದೇಶದಲ್ಲಿರುವ ಯಕ್ಷಗಾನ ದೇಶ ವಿದೇಶಗಳಲ್ಲಿ ಪ್ರಸಿದ್ದಿ ಪಡೆದಿದೆ. ನಮ್ಮ ಭಾಗದ ಬಯಲಾಟ ಇನ್ನು ಆ ಮಟ್ಟಕ್ಕೆ ತಲುಪಿಲ್ಲ. ಹಾಗಾಗಿ ವಾದ್ಯಗಾರರು, ವಿದ್ವಾಂಸರು, ಕಲಾವಿದರು ಒಟ್ಟಿಗೆ ಸೇರಿ ಬಯಲಾಟವನ್ನು ಉಳಿಸಿ ಬೆಳೆಸಬೇಕಿದೆ. ಬಯಲಾಟವನ್ನು ರಾತ್ರಿಯಿಡಿ ಗ್ರಾಮಗಳಲ್ಲಿ ಕುಳಿತು ವೀಕ್ಷಿಸುವವರ ಸಂಖ್ಯೆ ಕಡಿಮೆಯಾಗಿದೆ. ಪ್ರಸ್ತುತ ಸನ್ನಿವೇಶಕ್ಕೆ ತಕ್ಕಂತೆ ಬಯಲಾಟವನ್ನು ಮಾರ್ಪಾಡುಗೊಳಿಸಿಕೊಳ್ಳುವ ಅಗತ್ಯವಿದೆ. ಅಕ್ಷರಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಪ್ರವೇಶಿಸಿದಾಗ ಮಾತ್ರ ಬಯಲಾಟ ಕಲೆಯನ್ನು ಉಳಿಸಿ ಮುಂದಿನ ಪೀಳಿಗೆಗೆ ಪರಿಚಯಿಸಬಹುದು ಎಂದು ಹೇಳಿದರು. ಕರ್ನಾಟಕ ಬಯಲಾಟ ಅಕಾಡೆಮಿ ಸದಸ್ಯರುಗಳಾದ ನಿಂಗಪ್ಪ, ಬಿ.ಮಾರನಾಯಕ, ಜಾನಪದ ವಿದ್ವಾಂಸ ಮೈಲಹಳ್ಳಿ ರೇವಣ್ಣ ವೇದಿಕೆಯಲ್ಲಿದ್ದರು. ರೈತ ಮುಖಂಡ ಕೆ.ಪಿ.ಭೂತಯ್ಯ ಸೇರಿದಂತೆ ದಾವಣಗೆರೆ, ಜಗಳೂರು, ಕೂಡ್ಲಿಗಿ, ಮೊಳಕಾಲ್ಮುರು, ನಾಯಕನಹಟ್ಟಿ ಸೇರಿದಂತೆ ವಿವಿಧ ಭಾಗಗಳಿಂದ ಆಗಮಿಸಿದ್ದ ಬಯಲಾಟ ಕಲಾವಿದರು ಸಂವಾದದಲ್ಲಿ ತಮ್ಮಲ್ಲಿನ ಕಲೆಯನ್ನು ಪ್ರದರ್ಶಿಸಿದರು.

ಜಾನಪದ ವಿದ್ವಾಂಸ ಡಾ.ಚಿಕ್ಕಣ್ಣ ಎಣ್ಣೆಕಟ್ಟೆ ಸಂವಾದದಲ್ಲಿ ಪಾಲ್ಗೊಂಡಿದ್ದರು.



# ಗಣಪತಿ ವಿಸರ್ಜನೆ ವೇಳೆ ಕಲ್ಲು ತೂರಾಟ ಪ್ರತಿಭಟನೆ



» ಚಿತ್ರದುರ್ಗ

ಮಂಡ್ಯ ನಾಗಮಂಗಲದ ಬದರಿಕೊಪ್ಪಲಿನಲ್ಲಿ ಗಣಪತಿ ವಿಸರ್ಜನೆ ವೇಳೆ ಜಿಹಾದಿ ಮುಸ್ಲಿಂ ಯುವಕರಿಂದ ಕಲ್ಲು ತೂರಾಟ ಖಂಡಿಸಿ ಚಿತ್ರದುರ್ಗ ನಾಗರಿಕರ ಸಮಿತಿ ಮತ್ತು ಸಾರ್ವಜನಿಕ ಗಣೇಶೋತ್ಸವ ಮಂಡಳಿಗಳ ಒಕ್ಕೂಟದವತಿಯಿಂದ ನಗರದಲ್ಲಿ ಪ್ರತಿಭಟನಾ ಮೆರವಣಿಗೆಯನ್ನು ನಡೆಸಿ ಜಿಲ್ಲಾಡಲಿತಕ್ಕೆ ಮನವಿ ಸಲ್ಲಿಸಲಾಯಿತು. ಮಂಡ್ಯ ಜಿಲ್ಲೆಯ ನಾಗಮಂಗಲದ ಬದರಿಕೊಪ್ಪಲಿನಲ್ಲಿ ಗಣಪತಿ ವಿಸರ್ಜನೆ ವೇಳೆ ಜಿಹಾದಿ ಮುಸ್ಲಿಂ ಯುವಕರಿಂದ (ಕಲ್ಲು ತೂರಾಟ, ಪೆಟ್ರೋಲ್ ಬಾಂಬ್ ದಾಳಿ ಮತ್ತು ಮಾರಕಾಸ್ತ್ರ) ಝುಳಪಿಸಿ ಹಿಂದುಗಳ ಮೇಲೆ ಹಲ್ಲೆ ನಡೆಸಿರುವ ಬಗ್ಗೆ ವಿಶ್ವ ಹಿಂದೂ ಪರಿಷದ್ ಖಂಡನೆ ಮಾಡಿ ಇದರ ಬಗ್ಗೆ ಉನ್ನತ ಮಟ್ಟದ ತನಿಖೆ ನಡೆಸಲು ಆಗ್ರಹಿಸಲಾಯಿತು.ನಾಗಮಂಗಲದ ಬದರಿಕೊಪ್ಪಲಿನಲ್ಲಿ ಪ್ರತಿಷ್ಠಾಪಿಸಲಾಗಿದ್ದ ಗಣೇಶ ಮೂರ್ತಿ ಇಂದು ವಿಸರ್ಜನಾ ಮೆರವಣಿಗೆ ಮಾಡಲಾಗಿತ್ತು. ಈ ವೇಳೆ ಜಿಹಾದಿ ಯುವಕರ ಗುಂಪು ಏಕಾಏಕಿ ಕಲ್ಲು ತೂರಾಟ, ಪೆಟ್ರೋಲ್ ಬಾಂಬ್ ದಾಳಿ ನಡೆಸಿದ್ದಾರೆ. ನಾಗಮಂಗಲದ ಮೈಸೂರು ರಸ್ತೆಯಲ್ಲಿರುವ ದರ್ಗಾ ಬಳಿ ಮೆರವಣಿಗೆ ಬಂದ ವೇಳೆ ಜಿಹಾದಿ ಯುವಕರು ಗಣೇಶ ಮೂರ್ತಿ ಮೇಲೆ ಕಲ್ಲು ತೂರಾಟ ನಡೆಸಿದ್ದಾರೆ. ಮೆರವಣಿಗೆ ವೇಳೆ ದರ್ಗಾ ಮುಂಭಾಗ ಗಣೇಶನ ಮೆರವಣಿಗೆ ನಡೆಸದಂತೆ ಜಿಹಾದಿಗಳು ಇಂತಹ ಕೃತ್ಯ ಮಾಡಿದ್ದಾರೆ ಎಂದು ದೂರಿದ್ದಾರೆ. ಈ ವೇಳೆ ಜಿಹಾದಿ ಯುವಕರು ಮಾರಕಾಸ್ತ್ರ ಜಳಪಿಸಿದ್ದಾರೆ ಅಲ್ಲದೆ ಹಿಂದೂ ಯುವಕರ ಮೇಲೆ ದಾಳಿ ನಡೆಸಿ ಭಯದ ವಾತಾವರಣ ನಿರ್ಮಿಸಿದ್ದಾರೆ. ಈ ಕೃತ್ಯ ಅತ್ಯಂತ ಖಂಡನೀಯ. ತಕ್ಷಣ ಜಿಹಾದಿಗಳನ್ನು ಬಂಧಿಸಿ ಕಠಿಣ ಕಾನೂನು ಕ್ರಮಕೈಗೊಳ್ಳಬೇಕು. ಈ ಕೃತ್ಯ ಉದ್ದೇಶಪೂರ್ವಕವಾಗಿದ್ದು ಅಲ್ಲದೆ ಪೂರ್ವಯೋಜಿತ ಕೃತ್ಯವಾಗಿದೆ.

---

**ಪ್ರಮುಖ ಸುದ್ದಿ**

# ಮಕ್ಕಳ ಪ್ರತಿಭೆ ಅನಾವರಣಕ್ಕೆ ಪ್ರತಿಭಾಕಾರಂಜಿ ಸೂಕ್ತ ವೇದಿಕೆ

» ಪರಶುರಾಂಪುರ

ಮಕ್ಕಳಲ್ಲಿ ಅಡಗಿರುವ ಸುಪ್ತ ಪ್ರತಿಭೆಅನಾವರಣಕ್ಕೆ ಪ್ರತಿಭಾಕಾರಂಜಿ ಸೂಕ್ತ ವೇದಿಕೆ ಎಂದು ಪ್ರಾ.ಶಾ.ಶಿ.ಸಂಘದ ಅಧ್ಯಕ್ಷ ಡಿ ಮಹಲಿಂಗಪ್ಪಅಭಿಪ್ರಾಯ ವ್ಯಕ್ತಪಡಿಸಿದರು.

ಹೋಬಳಿಯ ಹರವಿಗೋಂಡನಹಳ್ಳಿ ಗ್ರಾಮದ ಸ. ಪ್ರಾ.ಹಿ ಶಾಲಾ ಆವರಣದಲ್ಲಿ ಪಗಡಲಬಂಡೆಕ್ಲಸ್ಟರ್ ಮಟ್ಟದ ಪ್ರತಿಭಾಕ ಾರಂಜಿಕಾರ್ಯಕ್ರಮವನ್ನು ಭಾಗವಹಿಸಿ ಮಾತನಾಡಿದರು.

ಆಸಕ್ತಿದಾಯಕಕ್ಷೇತ್ರದಲ್ಲಿ ಮಕ್ಕಳನ್ನು ಪೋಷಕರು ಮತ್ತು ಶಿಕ್ಷಕರು ಪ್ರೋತ್ಸಾಹಿಸಬೇಕು.ಅಲ್ಲದೆಬಾಲ್ಯದಲ್ಲಿಅವರ ಪ್ರತಿಭೆಗಳನ್ನು ಅನಾವರಣಕ್ಕೆ ಪಠ್ಯೇತರ ಚಟುವಟಿಕೆಗಳು ಅಗತ್ಯ.ಮಕ್ಕಳು ಬೌದ್ಧಿಕ ಹಾಗೂ ಭೌತಿಕ ವಿಕಸನ ಸ್ಪರ್ಧಾತ್ಮಕಜಗತ್ತಿಗೆ ಪೂರಕವಾಗಬೇಕು'ಎಂದು ತಿಳಿಸಿದರು.

ಗ್ರಾ.ಪಂ ಅಧ್ಯಕ್ಷ ರವಿಚಂದ್ರ ಮಾತನಾಡಿ,ಬಾಲ್ಯಾವಸ್ಥೆಯಲ್ಲಿ ಮಕ್ಕಳು ಟಿವಿ,ಮೊಬೈಲ್ ಗೀಳಿನಿಂದ ಹೊರಬಂದು ಜಾನಪದ,ದೇಶೀಯ ಕಲೆಗಳನ್ನು,ಸಾಹಿತ್ಯ ಬರವಣಿಗೆಆಸಕ್ತಿಯನ್ನು ಮೈಗೂಡಿಸಿ ಕೊಳ್ಳಬೇಕು ಎಂದರು.

ಜಿಲ್ಲಾ ಮಟ್ಟದಉತ್ತಮ ಶಿಕ್ಷಕ ಪ್ರಶಸ್ತಿ ಪಡೆದ ಮುಖ್ಯ ಶಿಕ್ಷಕ ಸುರೇಶ್ ಮಾತನಾಡಿ ,ಪ್ರಾಥಮಿಕ ಹಂತದಲ್ಲಿನಗುಣಾತ್ಮಕ ಶಿಕ್ಷಣ ಭವಿಷ್ಯದಉನ್ನತ ಶಿಕ್ಷಣಕ್ಕೆ ಭದ್ರ ಬುನಾದಿ ಯಾಗಲಿದೆ.ಪ್ರತಿಭಾಕಾರಂಜಿಕಾರ್ಯಕ್ರಮದಲ್ಲಿ ನಿರ್ಣಾಯಕರಾದ ಶಿಕ್ಷಕರು ನೈಜ ಪ್ರತಿಭೆಗಳನ್ನು ಗುರುತಿಸಿಮೂಲಕ ತಾಲೂಕು,ಜಿಲ್ಲಾ,ರಾಜ್ಯಮಟ್ಟಕ್ಕೆ ಆಯ್ಕೆಗೊಳ್ಳಲು ಪ್ರೇರೇಪಿಸಬೇಕು ಎಂದು ಸಲಹೆ ನೀಡಿದರು. ಸಿಆರ್‌ಪಿ ಪ್ರಕಾಶ್ ಪ್ರಾಸ್ತಾವಿಕವಾಗಿ ಮಾತನಾಡಿ,ಇಂದಿನ ಮಕ್ಕಳೇ ಭವಿಷ್ಯದದೇಶದ ನಿರ್ಮಾತೃಗಳು.ಮಕ್ಕಳ ಸುಂದರ ಕನಸ್ಸುಗಳನ್ನು ಪ್ರತಿಭಾಕಾರಂಜಿ ವೇದಿಕೆ ಮೂಲಕ ಅರಳಿಸಬೇಕು ಎಂದರು.ಪ್ರತಿಭಾಕಾರಂಜಿಯಲ್ಲಿ ಭಾಗವಹಿಸಿದ್ದ ಮಕ್ಕಳು ಛೇದ್ಮವೇಶ,ಏಕಪಾತ್ರ ಅಭಿನಯ,ಕ್ಲೇಮಾಡ್ಲಿಂಗ್,ಕವಾಲಿ,ಗಜಲ್,ಭಾಷಣ, ಕಂಠಪಾಠ,ರಸಪ್ರಶ್ನೆ ಸ್ಪರ್ಧೆಗಳು ಸೇರಿದಂತೆ ಚಟುವಟಿಕೆಗಳು ನಡೆದವು.ವಿವಿಧ ವಿಶೇಷ ಉಡುಪುಗಳಲ್ಲಿ ಮಕ್ಕಳು ಮಿಂಚುತ್ತಿದ್ದರು.

ಈ ಸಂದರ್ಭದಲ್ಲಿ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ವೇದಿಕೆಯಲ್ಲಿಗಣ್ಯರು, ತೀರ್ಪುಗಾರರನ್ನ ಸನ್ಮಾನಿಸಿದರು. ಗ್ರಾಪಂಅಧ್ಯಕ್ಷರವಿಚಂದ್ರ, ಸದಸ್ಯ ಸುಧೀಂದ್ರಕುಮಾರ, ಎಸ್ಡಿಎಂಸಿ ಅಧ್ಯಕ್ಷರಾಮದಾಸ್, ಸದಸ್ಯೆ ಸರೋಜಮ್ಮ ಬಸವರಾಜು,ಪ್ರಾ.ಶಾ.ಶಿ.ಸಂಘದ ಅಧ್ಯಕ್ಷ ಡಿ.ಮಹಾಲಿಂಗಪ್ಪ, ಕಾರ್ಯದರ್ಶಿ ತಿಪ್ಪೇಸ್ವಾಮಿ, ನಿಕಟ ಪೂರ್ವಅಧ್ಯಕ್ಷಈರಣ್ಣ, ಸಿಆರ್ ಪಿಗಳಾದ ಪ್ರಕಾಶ್, ನೀಲಕಂಠಪ್ಪ,ನಳಿನಾಕ್ಷಿ, ಮುಖ್ಯ ಶಿಕ್ಷಕರಾದ ಸುರೇಶ್, ಮಲ್ಲಿಕಾರ್ಜುನ,ಕರಿಯಣ್ಣ,ಮುಖಂಡ ವೆಂಕಟೇಶ್ ಸೇರಿದಂತೆತೀರ್ಪುಗಾರಾಗಿ ವಿವಿಧ ಶಾಲೆಗಳ ಶಿಕ್ಷಕರು, ವಿದ್ಯಾರ್ಥಿಗಳು, ಪೋಷಕರು, ಗ್ರಾಮಸ್ಥರು ಉಪಸ್ಥಿತರಿದ್ದರು.



## ಫಾಸ್ಟ್ ನ್ಯೂಸ್

### ವಿಶ್ವಕರ್ಮ ಜಯಂತಿ

» ದಾವಣಗೆರೆ

ಜಿಲ್ಲಾಡಳಿತ ವತಿಯಿಂದ ವಿಶ್ವಕರ್ಮ ಜಯಂತಿಯನ್ನು ಸೆ.17 ರಂದು ಬೆಳಿಗ್ಗೆ 11.00 ಗಂಟೆಗೆ ಕಾಳಿಕಾಂಬ ದೇವಸ್ಥಾನ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ದೇಶಕರಾದ ರವಿಚಂದ್ರ ತಿಳಿಸಿದ್ದಾರೆ.

### ಮಕ್ಕಳ ಕಲಿಕೆಯಲ್ಲಿ ತಾಯಂದಿರ ಪಾತ್ರ ಬಹುಮುಖ್ಯ



» ಹೊಸದುರ್ಗ

ಶಾಲೆಯಲ್ಲಿ ಓದುವ ಎಲ್ಲಾ ವಿದ್ಯಾರ್ಥಿಗಳು ಒಂದೇ ಬುದ್ಧಿ ಸಾಮರ್ಥ್ಯ ಹೊಂದಿರುವುದಿಲ್ಲ. ಪ್ರತಿಯೊಬ್ಬ ವಿದ್ಯಾರ್ಥಿಯೂ ಒಂದಲ್ಲ ಒಂದು ವಿಷಯದಲ್ಲಿ ಆಸಕ್ತಿ ಹೊಂದಿರುತ್ತಾರೆ. ಅಂಥ ಆಸಕ್ತಿ ಗುರುತಿಸಿ ಅವರಿಗೆ ಪ್ರೋತ್ಸಾಹ ಕೊಡುವುದು ಪೋಷಕರು ಮತ್ತು ಶಿಕ್ಷಕರ ಕರ್ತವ್ಯವೆಂದು ಕನ್ನಡ ಅಧ್ಯಾಪಕ ಜಿ ಎಸ್ ಗಿರಿಜಾಶಂಕರ್ ಹೇಳಿದರು. ಪಟ್ಟಣದ ಶ್ರೀ ತೋಟದ ರಾಮಯ್ಯ ಗೌರಮ್ಮ ಬಾಲಿಕಾ ಪ್ರೌಢಶಾಲೆಯಲ್ಲಿ ಗುರುವಾರ ನಡೆದ ಮಕ್ಕಳ ಮತ್ತು ತಾಯಂದಿರ ಸಮಲೋಚನೆ ಮತ್ತು ಚಿಂತನ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು.ಮಕ್ಕಳ ಕಲಿಕೆಯಲ್ಲಿ ಪೋಷಕರ ಜವಾಬ್ದಾರಿಗಳನ್ನು ತಿಳಿಸಿದರು. ಈ ಸಭೆಯ ಅಧ್ಯಕ್ಷೀಯ ನುಡಿಗಳನ್ನಾಡಿದ ಮುಖ್ಯ ಶಿಕ್ಷಕ ಎ ಎನ್ ಕಿರಣ ಕುಮಾರ್ ಶಾಲೆಯ ಮುಖ್ಯಮಕ್ಕಳ ಕಲಿಕಾ ಪ್ರಗತಿಯಲ್ಲಿ ಶಿಕ್ಷಕರ ಪಾತ್ರದಷ್ಟೇ ಪೋಷಕರ ಪಾತ್ರವೂ ಇದೆ. ಆದರೆ ಅನೇಕ ಪೋಷಕರ ನಿರಾಸಕ್ತಿಯಿಂದ ಮಕ್ಕಳು ಕಲಿಕೆಯ ಬಗ್ಗೆ ಆಸಕ್ತಿ ತೋರದೆ ಉದಾಸೀನ ಪ್ರವೃತ್ತಿಯನ್ನು ಬೆಳೆಸಿಕೊಳ್ಳುತ್ತಾರೆ. ಮಕ್ಕಳ ಚಲನವಲನಗಳ ಬಗ್ಗೆ ತಾಯಂದಿರು ಹೆಚ್ಚು ಗಮನಹರಿಸಬೇಕು ಎಂದು ಕಿವಿ ಮಾತು ಹೇಳಿದರು. ಮಕ್ಕಳ ಕಲಿಕೆಯನ್ನು ಕುರಿತು ಶಿಕ್ಷಕರಾದ ಬಿ ಮಧು ಮಾತನಾಡಿದರು. ಶಿಕ್ಷಕರಾದ ಜಿ ಎಲ್ ರಂಗನಾಥ್ ಕಾರ್ಯಕ್ರಮ ನಿರೂಪಿಸಿದರು. ವಿದ್ಯಾರ್ಥಿಗಳಾದ ರುಶ್ಮಿತ ಮತ್ತು ಪೂಜಾ ಪ್ರಾರ್ಥಿಸಿದರು. ಶಿಕ್ಷಕಿ ಸವಿತಾ ಸ್ವಾಗತಿಸಿದರು. ಶಿಕ್ಷಕ ಅಶೋಕ್ ವಂದಿಸಿದರು. ಸಭೆಯಲ್ಲಿ ಪೋಷಕರು ತಮ್ಮ ಮಕ್ಕಳ ಕಲಿಕೆ ಕುರಿತು ಅಭಿಪ್ರಾಯ ತಿಳಿಸಿದರು.

### ವಿದ್ಯಾರ್ಥಿಗಳು ವಿದ್ಯಾಭ್ಯಾಸದ ಜೊತೆಗೆ ಆಟ, ಪಾಠ, ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ತೊಡಗಿಸಿಕೊಳ್ಳಬೇಕು



» ಹೊಸದುರ್ಗ

ವಿದ್ಯಾರ್ಥಿಗಳು ವಿದ್ಯಾಭ್ಯಾಸದ ಜೊತೆಗೆ ಆಟ, ಪಾಠ, ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ತೊಡಗಿಸಿಕೊಳ್ಳಬೇಕು. ಇದರಿಂದ ಮಾನಸಿಕ ಹಾಗೂ ದೈಹಿಕ ಆರೋಗ್ಯ ಸದೃಢಗೊಳ್ಳಲಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಸೈಯದ್ ಮೋಸೀನ್ ತಿಳಿಸಿದರು. ತಾಲ್ಲೂಕಿನ ಎಂಜಿ ದಿಬ್ಬ ಗ್ರಾಮದ ಎಂ. ವಿ ರುದ್ರಪ್ಪ ಸರ್ಕಾರಿ ಪ್ರೌಢ ಶಾಲೆಯಲ್ಲಿ ಆಯೋಜಿಸಿದ್ದ 2024-25ನೇ ಸಾಲಿನ ಕಸಬ ಹೋಬಳಿಯ ಪ್ರೌಢಶಾಲೆ ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಪಠ್ಯ ವಿಷಯದ ಜೊತೆ ಪಠ್ಯೇತರ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಬೇಕು .ವಿದ್ಯಾರ್ಥಿಗಳಲ್ಲಿ ಅಡಗಿರುವ ಸುಪ್ತ ಪ್ರತಿಭೆಯನ್ನು ಹೊರ ಹಾಕಲು ಪ್ರತಿಭಾ ಕಾರಂಜಿ ಉತ್ತಮ ವೇದಿಕೆಯಾಗಿದ್ದು, ಇದನ್ನು ಬಳಕೆ ಮಾಡಿಕೊಳ್ಳಲು ಪೋಷಕರು ಸಹಕರಿಸಬೇಕು ಎಂದರು. ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಶಾಂತಪ್ಪ ಮಾತನಾಡಿ, ಮಕ್ಕಳಲ್ಲಿರುವ ಸೂಕ್ತ ಪ್ರತಿಭೆಯನ್ನು ಅನಾವರಣಗೊಳಿಸುವುದೇ ಪ್ರತಿಭಾ ಕಾರಂಜಿ ಕಾರ್ಯಕ್ರಮದ ಉದ್ದೇಶವಾಗಿದೆ ಎಂದು ಹೇಳಿದರು. ಬಿ.ಆರ್.ಸಿ. ಶ್ರೀನಿವಾಸ್, ಶಿಕ್ಷಣ ಸಂಯೋಜಕ ಶಶಿಧರ ಎಂ. ಮಾತನಾಡಿದರು. ಬೋಕಿಕೆರೆ ಗ್ರಾಮ ಪಂಚಾಯಿತಿಯ ಅಧ್ಯಕ್ಷೆ ಕರಿಯಮ್ಮ, ಅಭಿವೃದ್ಧಿ ಅಧಿಕಾರಿ ಜಯಣ್ಣ, ಹೊಸದುರ್ಗ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಮಂಜುನಾಥ , ಪ್ರೌಢಶಾಲಾ ಮುಖ್ಯ ಶಿಕ್ಷಕ ಗೋದಪ್ಪ, ಪ್ರೌಢಶಾಲಾ ಶಿಕ್ಷಕರ ಸಂಘದ ದಯಾನಂದ, ಅಶ್ವತ್ಥ ಕುಮಾರ, ದೇವರಾಜ, ಶ್ರೀಧರ ಅಕ್ಷರವಾಣಿ ಸೇರಿದಂತೆ ಕಸಬ ಹೋಬಳಿಯ ಶಿಕ್ಷಕರು ಹಾಜರಿದ್ದರು.

ಸೆಪ್ಟೆಂಬರ್ 15 ರಂದು ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ನ್ಯಾಮತಿ ಗಡಿಯಿಂದ
ಹರಿಹರ ಗಡಿವರೆಗೆ 80 ಕಿ.ಮೀ ಬೃಹತ್ ಮಾನವ ಸರಪಳಿ ನಿರ್ಮಾಣ: ಜಿಲ್ಲಾಧಿಕಾರಿ

# 70,000 ಜನರು ಭಾಗಿ; ಗಂಗಾಧರಸ್ವಾಮಿ

» ದಾವಣಗೆರೆ



ವಿಶ್ವಸಂಸ್ಥೆ ಸೆಪ್ಟೆಂಬರ್ 15 ನ್ನು ಅಂತರಾಷ್ಟ್ರೀಯ ಪ್ರಜಾಪ್ರಭುತ್ವದ ದಿನವೆಂದು ಘೋಷಣೆ ಮಾಡಿದ್ದು ಈ ದಿನ ಸಂವಿಧಾನ ಜಾಗೃತಿ ಮೂಡಿಸಲು ಜಿಲ್ಲೆಯಲ್ಲಿ 80 ಕಿಲೋಮೀಟರ್ ಬೃಹತ್ ಮಾನವ ಸರಪಳಿ ನಿರ್ಮಾಣ ಮಾಡುವ ಮೂಲಕ ಸಂವಿಧಾನದ ಜಾಗೃತಿ ಮತ್ತು ಆಶಯಗಳನ್ನು ಜನರಿಗೆ ತಲುಪಿಸಲು ಎಲ್ಲಾ ಸಿದ್ದತೆ ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದರು.

ಅವರು ಗುರುವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕರೆಯಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು. ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ರಾಜ್ಯ ಸರ್ಕಾರ ಬಹಳ ವಿನೂತನವಾದ ಕಾರ್ಯಕ್ರಮ ಹಮ್ಮಿಕೊಂಡಿದೆ. ಬೀದರ್‌ನಿಂದ ಚಾಮರಾಜನಗರದ ವರೆಗೂ ಮಾನವ ಸರಪಳಿ ನಿರ್ಮಾಣ ಮಾಡುವ ಮೂಲಕ ಬೃಹತ್ ಸಂವಿಧಾನ ಜಾಗೃತಿ ಮೂಡಿಸುವ ಕಾರ್ಯಕ್ರಮ ಇದಾಗಿದ್ದು ಜಿಲ್ಲೆಯ 80 ಕಿ.ಮೀ ದೂರ ಇದು ಹಾದುಹೋಗಲಿದೆ. ಈ ವ್ಯಾಪ್ತಿಯಲ್ಲಿ ಮಾನವ ಸರಪಳಿ ನಿರ್ಮಾಣಕ್ಕಾಗಿ ಸುಮಾರು 70 ಸಾವಿರಕ್ಕಿಂತಲೂ ಹೆಚ್ಚು ಜನರು ಭಾಗಿಯಾಗಲು ಎಲ್ಲಾ ಸಿದ್ದತೆ ಮಾಡಿಕೊಳ್ಳಲಾಗಿದೆ ಎಂದರು.

ಸೆಪ್ಟೆಂಬರ್ 15 ರ ಬೆಳಿಗ್ಗೆ 8.30 ರಿಂದ 9.30 ವರೆಗೆ ಮಾನವ ಸರಪಳಿ ಕಾರ್ಯಕ್ರಮ ನಡೆಯಲಿದ್ದು ದಾವಣಗೆರೆ ಜಿಲ್ಲೆಯ ಗಡಿ ತಾಲ್ಲೂಕು ನ್ಯಾಮತಿಯ ಟಿ.ಗೋಪಗೊಂಡನಹಳ್ಳಿಯಿಂದ ಹರಿಹರ ಪಟ್ಟಣ ಸೇರಿದಂತೆ ರಾಣೆಬೆನ್ನೂರು ಗಡಿ ಕೋಡಿಯಾಲದವರೆಗೆ ಸುಮಾರು 80 ಕಿ.ಮೀ ಉದ್ದದ ಮಾನವ ಸರಪಳಿ ಇದಾಗಿದೆ. 10 ಗ್ರಾಮ ಪಂಚಾಯಿತಿಗಳು, ಎರಡು ಸ್ಥಳೀಯ ಸಂಸ್ಥೆಗಳು, 25 ಗ್ರಾಮಗಳ ವ್ಯಾಪ್ತಿಯಲ್ಲಿ ಹಾದುಹೋಗಲಿದೆ ಎಂದರು.

ಜಿಲ್ಲೆಯ ಎಲ್ಲಾ ಶಾಲಾ, ಕಾಲೇಜಿನ ವಿದ್ಯಾರ್ಥಿಗಳು, ಸಂಘ ಸಂಸ್ಥೆಯ ಪ್ರತಿನಿಧಿಗಳು, ಸಾರ್ವಜನಿಕರು, ಮಹಿಳೆಯರು, ಸ್ವಸಹಾಯ ಸಂಘದವರು ಸೇರಿದಂತೆ ಸಾವಿರಾರು ಪ್ರತಿನಿಧಿಗಳು ಭಾಗವಹಿಸುತ್ತಿದ್ದು ಆಸಕ್ತ ಸಾರ್ವಜನಿಕರು, ಕಲಾವಿದರುತಮಗೆಹತ್ತಿರವಾಗುವಸ್ಥಳದಲ್ಲಿ ಭಾಗಿಯಾಗಬಹುದು. ಮತ್ತು ವಿವಿಧ ಮಠಾಧೀಶರನ್ನು ಆಹ್ವಾನಿಸಲಾಗುತ್ತಿದ್ದು ಅವರಿಗೆ ಅನುಕೂಲವಾಗುವ ಸ್ಥಳದಲ್ಲಿ ಭಾಗವಹಿಸಬಹುದಾಗಿದೆ, ಅವರೆಲ್ಲರಿಗೂ ಆಮಂತ್ರಣ ಕಳುಹಿಸಲಾಗುತ್ತದೆ ಎಂದರು.

ಮಾನವ ಸರಪಳಿ ನಿರ್ಮಾಣದ ವೇಳೆ ಪ್ರತಿ 100 ಮೀಟರ್ ಗೆ ಒಬ್ಬ ವಿಭಾಗಾಧಿಕಾರಿ, ಕಿಲೋಮೀಟರ್‌ಗೆ ಒಬ್ಬರಂತೆ ನೋಡಲ್ ಅಧಿಕಾರಿಗಳನ್ನು ಉಸ್ತುವಾರಿಗಾಗಿನೇಮಕಮಾಡಲಾಗುತ್ತದೆ. ಈ ದಿನವನ್ನು ವಿಶೇಷ ಕರ್ತವ್ಯ ದಿನವನ್ನಾಗಿ ಘೋಷಣೆ ಮಾಡಿದ್ದು ಎಲ್ಲ ಶಾಲಾ, ಕಾಲೇಜಿನ ವಿದ್ಯಾರ್ಥಿಗಳು ಮತ್ತು ಶಿಕ್ಷಕರು ಭಾಗವಹಿಸಬೇಕು. ಇದಕ್ಕಾಗಿ ವಿದ್ಯಾರ್ಥಿಗಳನ್ನು ಕರೆದುಕೊಂಡು ಹೋಗಲು ವಿವಿಧ ವಾಹನಗಳ ಜೊತೆಗೆ 200 ಶಾಲಾ ಬಸ್‌ಗಳ ವ್ಯವಸ್ಥೆ ಮಾಡಲಾಗಿದೆ ಎಂದರು.

ಸೆಪ್ಟೆಂಬರ್ 15 ರಂದು ಬೆಳಗ್ಗೆ 8.30 ಕ್ಕೆ ರಸ್ತೆಯ ಎಡ ಭಾಗದಲ್ಲಿ ಮಾನವ ಸರಪಳಿ ನಿರ್ಮಾಣ ಕಾರ್ಯ ಆರಂಭವಾಗಲಿದೆ. ನಂತರ 9 ಗಂಟೆಗೆ ಮಾನವ ಸರಪಳಿ ರಚಿಸಲಾಗುತ್ತದೆ. 9-15 ರ ವರೆಗೆ ಛಾಯಾಚಿತ್ರ ತೆಗೆದು ನಂತರ ಸಂವಿಧಾನ ಪೀಠಿಕೆ ಓದಿದ ನಂತರ 9.30 ಕ್ಕೆ ಕಾರ್ಯಕ್ರಮ ಮುಕ್ತಾಯವಾಗಲಿದೆ. ಅಲ್ಲಿಯೇ ಸುಮಾರು 10 ಸಾವಿರ ಸಸಿ ನೆಡುವ ಕಾರ್ಯಕ್ರಮದ ಜೊತೆಗೆ ಸ್ವಚ್ಚತಾ ಪಾಕ್ಷಿಕದ ಅಂಗವಾಗಿ ಸ್ವಚ್ಚತೆಯೇ ಸೇವಾ ಕಾರ್ಯಕ್ರಮದ ಅಂಗವಾಗಿ ಪ್ಲಾಸ್ಟಿಕ್ ಸಂಗ್ರಹಿಸಲಾಗುತ್ತದೆ.

ಕಾರ್ಯಕ್ರಮದ ಆರಂಭಿಕ ಸ್ಥಳ ನ್ಯಾಮತಿ ಟಿ.ಗೋಪಗೊಂಡನಹಳ್ಳಿಯಲ್ಲಿ ಶಾಸಕರು ಭಾಗವಹಿಸಲಿದ್ದು ಹರಿಹರ ನಗರದ ಮಹಾತ್ಮ ಗಾಂಧಿ ಮೈದಾನದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ಅವರು ಭಾಗವಹಿಸಲಿದ್ದು ಸಂಸದರು, ಶಾಸಕರು, ಜನಪ್ರತಿನಿಧಿಗಳು ಭಾಗವಹಿಸುವರು. ಇಲ್ಲಿ ಸಿದ್ದಗಂಗಾ ಶಾಲಾ ಮಕ್ಕಳಿಂದ ವಿನೂತನವಾಗಿ ಭಾರತ ಭೂಪಟ ರಚನೆ ಮಾಡುವ ಮೂಲಕ ಕಾರ್ಯಕ್ರಮದ ಮುಕ್ತಾಯವಾಗಲಿದೆ. ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಹಾಗೂ ಯಶಸ್ವಿಯಾಗಿ ಆಯೋಜಿಸಲು ಎಲ್ಲಾ ಸಿದ್ದತೆ ಮಾಡಿಕೊಳ್ಳಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಭಾಗವಹಿಸುವ ಆಸಕ್ತರು https;//www.democracydaykarnataka.in/registration ಲಿಂಕ್ ಮೂಲಕ ನೊಂದಾಯಿಸಬಹುದಾಗಿದೆ, ಇಲ್ಲಿಯವರೆಗೆ ಸುಮಾರು 7000 ಜನರು ನೊಂದಾಯಿಸಿದ್ದು ಹೆಚ್ಚು ಜನರು ನೊಂದಾಯಿಸಿ ಕಾರ್ಯಕ್ರಮದಲ್ಲಿ ಭಾಗವಹಿಸುವ ಮೂಲಕ ಪ್ರಮಾಣ ಪತ್ರ ಪಡೆಯಬಹುದಾಗಿದೆ ಎಂದು ತಿಳಿಸಿದರು.

**ಸರ್ಕಾರಿ ನೌಕರರು ಕಡ್ಡಾಯ ಭಾಗಿ;** ಎಲ್ಲಾ ಇಲಾಖೆಗಳ ಹೊರಗುತ್ತಿಗೆ ಸೇರಿದಂತೆ ಖಾಯಂ ಸಿಬ್ಬಂದಿ, ಅಧಿಕಾರಿಗಳು, ಅನುದಾನಿತ ಶಾಲಾ, ಕಾಲೇಜಿನ ಸಿಬ್ಬಂದಿ, ಬೋಧಕರು, ಅನುದಾನ ರಹಿತ ಶಾಲಾ, ಕಾಲೇಜಿನ ಸಿಬ್ಬಂದಿ, ಬೋಧಕ ವರ್ಗದವರು ಬೆಳಗ್ಗೆ 7 ಗಂಟೆಗೆ ಆಯಾ ತಾಲ್ಲೂಕು ತಹಶೀಲ್ದಾರರ ಕಚೇರಿಯಲ್ಲಿ ವರದಿ ಮಾಡಿಕೊಂಡು ಮಾನವ ಸರಪಳಿ ನಿರ್ಮಾಣದಲ್ಲಿ ಭಾಗವಹಿಸಬೇಕು. ದಾವಣಗೆರೆ ಹಾಗೂ ಜಗಳೂರು ತಾಲ್ಲೂಕಿನವರು ಹರಿಹರ ತಹಶೀಲ್ದಾರರ ಕಚೇರಿಯಲ್ಲಿ ವರದಿ ಮಾಡಿಕೊಳ್ಳಬೇಕು, ಚನ್ನಗಿರಿ ಹಾಗೂ ನ್ಯಾಮತಿ ತಾಲ್ಲೂಕಿನವರು ಹೊನ್ನಾಳಿ ತಹಶೀಲ್ದಾರರ ಕಚೇರಿಯಲ್ಲಿ ವರದಿ ಮಾಡಿಕೊಳ್ಳಬೇಕೆಂದು ಸೂಚಿಸಲಾಗಿದೆ ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್ ಮಾತನಾಡಿ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ನಡೆಯುವ ಮಾನವ ಸರಪಳಿ ನಿರ್ಮಾಣಕ್ಕಾಗಿ ಗ್ರಾಮ ಮಟ್ಟದಲ್ಲಿ ಯೋಜನೆ ರೂಪಿಸಿಕೊಳ್ಳಲಾಗಿದೆ. 10 ಗ್ರಾಮ ಪಂಚಾಯಿತಿಗಳ ವ್ಯಾಪ್ತಿ ಬರಲಿದ್ದು ಅಲ್ಲಿನ ಸಾರ್ವಜನಿಕರು, ಪಂಚಾಯಿತಿ ಸದಸ್ಯರು ಭಾಗಿಯಾಗುವಂತೆ ಎಲ್ಲಾ ಸಂಘಟನೆಗಳೊಂದಿಗೆ ಮನವಿ ಮಾಡಲಾಗಿದೆ. ಸೆಪ್ಟೆಂಬರ್ 17 ರಿಂದ ಅಕ್ಟೋಬರ್ 1 ರವರೆಗೆ ಸ್ವಚ್ಚತಾ ಸೇವಾ ಪಾಕ್ಷಿಕ ಅಂಗವಾಗಿ ಸ್ವಚ್ಚತಾ ಕಾರ್ಯ ಕೈಗೊಳ್ಳುವುದು, ತಾಯಿಯ ಹೆಸರಲ್ಲಿ ಪ್ರತಿಯೊಬ್ಬರೂ ಒಂದು ಗಿಡ ನೆಡುವ ಕಾರ್ಯಕ್ರಮವನ್ನು ಅಂದು ರೂಪಿಸಿಕೊಳ್ಳಲಾಗಿದೆ ಎಂದರು.

ಘನತ್ಯಾಜ್ಯ ಸಂಗ್ರಹಣಾ ಕೇಂದ್ರ, ಸ್ವಚ್ಚತಾ ಘಟಕ ನಿರ್ವಹಣೆ, ಸಾರ್ವಜನಿಕ ಶೌಚಾಲಯಗಳ ಉದ್ಘಾಟನೆ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಅಂದು ರೂಪಿಸಿಕೊಳ್ಳಲಾಗಿದೆ ಎಂದರು.

ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಉಮಾ ಪ್ರಶಾಂತ್ ಮಾತನಾಡಿ 80 ಕಿ.ಮೀ ಉದ್ದದ ಮಾನವ ಸರಪಳಿ ನಿರ್ಮಾಣ ಮಾಡುವುದರಿಂದ ಶಾಲಾ, ಕಾಲೇಜಿನ ಮಕ್ಕಳು, ಸಾರ್ವಜನಿಕರು ಭಾಗಿಯಾಗುವುದರಿಂದ ಇಲಾಖಾ ಸಿಬ್ಬಂದಿಗಳ ಜೊತೆಗೆ ಎನ್.ಸಿ.ಸಿ. ಜೊತೆಗೆ ಗೃಹರಕ್ಷಕ ದಳದ ಸಿಬ್ಬಂದಿಗಳನ್ನು ನೇಮಕ ಮಾಡಿ ಸೂಕ್ತ ಬಂದೋಬಸ್ತ್ ವ್ಯವಸ್ಥೆ ಮಾಡಲಾಗುತ್ತದೆ ಎಂದರು.

ಮಹಿಳೆಯರ ಆತ್ಮ ರಕ್ಷಣಾ ನಾರಿಶಕ್ತಿ ಕಾರ್ಯಕ್ರಮ

## ಮಹಿಳೆಯರಿಗೆ ರಕ್ಷಣೆಯಲ್ಲ, ಹೆಚ್ಚಿನ ಸುರಕ್ಷತೆ ಅಗತ್ಯ; ಸಂಸದರಾದ ಡಾ; ಪ್ರಭಾ ಮಲ್ಲಿಕಾರ್ಜುನ್

» ದಾವಣಗೆರೆ




ದೇಶದಲ್ಲಿ ಹೆಣ್ಣು ಮಕ್ಕಳಿಗೆ ರಕ್ಷಣೆ ಜೊತೆಗೆ ಹೆಚ್ಚಿನ ಸುರಕ್ಷತೆ ಕಲ್ಪಿಸುವ ಮೂಲಕ ಸಮಾಜದಲ್ಲಿ ಉತ್ತಮ ವಾತಾವರಣ ನಿರ್ಮಾಣ ಮಾಡಬೇಕಾಗಿದೆ ಎಂದು ಸಂಸದರಾದ ಡಾ. ಪ್ರಭಾ ಮಲ್ಲಿಕಾರ್ಜುನ್ ತಿಳಿಸಿದರು.

ಗುರುವಾರ ನಗರದ ಪೊಲೀಸ್ ಕವಾಯತ್ ಮೈದಾನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಪೊಲೀಸ್ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ 'ನಾರಿ ಶಕ್ತಿ ಕಾರ್ಯಕ್ರಮ' ಉದ್ಘಾಟಿಸಿ ಹಾಗೂ ಸುರಕ್ಷಾ ಆ್ಯಪ್‌ಗೆ ಚಾಲನೆ ನೀಡಿ ಬಳಿಕ ಮಾತಾನಾಡಿದರು. ಹೆಣ್ಣು ಮಕ್ಕಳಿಗಾಗಿ ಹೆಲ್ಪ್ ಲೈನ್, ಕಾನೂನಿನಲ್ಲಿರುವ ಸುರಕ್ಷತೆಯ ಜೊತೆಗೆ ಆತ್ಮ ರಕ್ಷಣೆಗೆ ಶಾಲಾ, ಕಾಲೇಜುಗಳಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಸಮಾಜದಲ್ಲಿ ಹೆಣ್ಣು ಮಕ್ಕಳಿಗೆ ಹೆಚ್ಚಿನ ಸುರಕ್ಷತೆಯ ವಾತಾವರಣವನ್ನು ನಿರ್ಮಾಣ ಮಾಡಬೇಕಿದೆ ಎಂದರು.

ಇತ್ತೀಚಿನ ದಿನಗಳಲ್ಲಿ ಹುಬ್ಬಳ್ಳಿ, ಪಶ್ಚಿಮ ಬಂಗಾಳದಲ್ಲಿ ನಡೆದ ಹೆಣ್ಣು ಮಕ್ಕಳ ಮೇಲಿನ ದೌರ್ಜನ್ಯಗಳನ್ನು ನೋಡಿದರೆ ನಾರಿ ಶಕ್ತಿಯಂತಹ ಆತ್ಮರಕ್ಷಣೆ ನೀಡುವ ಕಾರ್ಯಕ್ರಮಗಳು ತುಂಬಾ ಅವಶ್ಯಕತೆ ಇದೆ. ಸರ್ಕಾರಿ ವಸತಿ ನಿಲಯದಲ್ಲಿ ಇರುವ ಹೆಣ್ಣು ಮಕ್ಕಳಿಗಾಗಿ ಸುರಕ್ಷತೆಯ ಜೊತೆಗೆ ಆರೋಗ್ಯ ಜಾಗೃತಿ ಮೂಡಿಸುವ ಕಾರ್ಯಕ್ರಮ ರೂಪಿಸಲಾಗುತ್ತದೆ. ಹಾಸ್ಟೆಲ್‌ಗಳಲ್ಲಿ ವಿದ್ಯಾಭ್ಯಾಸ ಮಾಡುವ ಹೆಣ್ಣು ಮಕ್ಕಳು ತಂದೆ, ತಾಯಿಗೆಕರೆಮಾಡಿತಮ್ಮದೈನಂದಿನ ಚಟುವಟಿಕೆಗಳ ಬಗ್ಗೆ ನಿಜವಾದ ಮಾಹಿತಿಯನ್ನು ನೀಡುತ್ತಿರಬೇಕು. ಬೇರುಗಳು ಗಟ್ಟಿಯಾಗಿದ್ದರೆ ಯಾವುದೇ ಬಿರುಗಾಳಿಗೆ ಅಲುಗಾಡುವುದಿಲ್ಲ, ಹಾಗೆಯೇ ಹೆಣ್ಣು ಮಕ್ಕಳು ಮನೆಯಲ್ಲಿ, ಶಾಲೆಯಲ್ಲಿ ಕಲಿತುಕೊಂಡ ಒಳ್ಳೆಯ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಜೀವನದಲ್ಲಿ ಒಳ್ಳೆಯ ಸಾಧನೆ ಮಾಡಬೇಕು ಎಂದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ಅವರು ಪ್ರತಿಜ್ಞಾವಿಧಿಭೋಧಿಸಿಮಾತಾನಾಡಿ ಕರಾಟೆ ದೈಹಿಕ, ಮಾನಸಿಕ ಆರೋಗ್ಯ ಕಾಪಾಡುವುದರ ಜೊತೆಗೆ ವೈಯಕ್ತಿಕ ಸಾರ್ವಜನಿಕ ಬದುಕಿನಲ್ಲಿ ಸಮಸ್ಯೆಗಳು ಬಂದಾಗ ಎದುರಿಸಲು ಸಹಕಾರಿಯಾಗುತ್ತದೆ. ದಾವಣಗೆರೆಯಲ್ಲಿ ಹೆಣ್ಣು ಮಕ್ಕಳ ಸುರಕ್ಷತೆಯನ್ನು ಇನ್ನಷ್ಟು ಬಲಪಡಿಸುವ ಉದ್ದೇಶದಿಂದ ಸುರಕ್ಷಾ ಆ್ಯಪ್ ಜೊತೆಗೆ ದುರ್ಗಾ ಪಡೆಯನ್ನು ಇನಷ್ಟು ಕಾರ್ಯ ಪ್ರವೃತ್ತಗೊಳಿಸಲಾಗಿದೆ. ಹೆಣ್ಣುಮಕ್ಕಳಿಗೆ ತೊಂದರೆಯಾದ ಸಂದರ್ಭದಲ್ಲಿ ಸಹಾಯವಾಣಿಗೆ ಕರೆ ಮಾಡಿದರೆ ತಕ್ಷಣ ಕ್ರಮಕೈಗೊಳ್ಳಲಾಗುವುದು, ಹೆಣ್ಣು ಮಕ್ಕಳು ದೈಹಿಕವಾಗಿ ಸದೃಢವಾಗಿದ್ದರೆ ಜೀವದಲ್ಲಿನ ಸವಾಲುಗಳನ್ನು ಎದುರಿಸಬಹುದು.

## ನಾಗಮಂಗಲ ಮತಾಂದರ ಗಲಭೆ: ಸಾರ್ವಜನಿಕ ಗಣೇಶೋತ್ಸವ ಮಂಡಳಿ ಒಕ್ಕೂಟದಿಂದ ಪ್ರತಿಭಟನೆ



» ಚಳ್ಳಕೆರೆ

ಮಂಡ್ಯ ಜಿಲ್ಲೆಯ ನಾಗಮಂಗಲದಲ್ಲಿ ಶ್ರೀಗಣೇಶ ವಿಸರ್ಜನೆ ಸಂದರ್ಭದಲ್ಲಿ ಮೆರವಣಿಗೆಯ ಮೇಲೆ ಕಲ್ಲು ತೂರಿ ಹಿಂಸಾಚಾರ ನಡೆಸಿ ಸಾರ್ವಜನಿಕರ ಆಸ್ತಿಪಾಸ್ತಿಗೆ ನಷ್ಟವನ್ನುಂಟು ಮಾಡಿದ ಮತಾಂದ ಕಿಡಿಗೇಡಿಗಳ ವಿರುದ್ದ ಕಾನೂನು ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿ ಸಾರ್ವಜನಿಕ ಗಣೇಶೋತ್ಸವ ಮಂಡಳಿ ಒಕ್ಕೂಟ, ನಾಗರೀಕ ಸಮಿತಿ ಪ್ರತಿಭಟನೆ ನಡೆಸಿ, ತಮ್ಮ ಆಕ್ರೋಶವನ್ನು ಹೊರಹಾಕಿದರು.

ನೆಹರೂ ವೃತ್ತದಲ್ಲಿ ನಡೆದ ಪ್ರತಿಭಟನೆಯಲ್ಲಿ ಮಾತನಾಡಿದ ಕೃಷ್ಣ, ಪ್ರತಿವರ್ಷ ನಾಗಮಂಗಲದಲ್ಲಿ ಗಣೋಶತ್ಸವ ಕಾರ್ಯಕ್ರಮ ನಡೆಯುವ ಸಂದರ್ಭದಲ್ಲಿ ಕಿಡಿಗೇಡಿ ಮತಾಂದರು ಕಲ್ಲುತೂರುವ ಮೂಲಕ ಸಾರ್ವಜನಿಕ ನೆಮ್ಮದಿಗೆ ಭಂಗತಂದಿದ್ದಾರೆ. ಶಾಂತಿಯಿಂದ ಇದ್ದ ಜನರನ್ನು ಕೆಣಕುವ ರೀತಿಯಲ್ಲಿ ವರ್ತಿಸಿದ್ದಾರೆ. ಪೊಲೀಸರನ್ನು ಲೆಕ್ಕಿಸದೆ ತಮ್ಮಗೆ ಇಷ್ಟಬಂದಾಗೆ ಅಂಗಡಿ, ಮುಂಗಟ್ಟುಗಳ ಮೇಲೆ ಪೆಟ್ರೋಲ್‌ಬಾಂಬ್ ಎಸೆದು ದುಷ್ಕೃತ್ಯ ಮೆರೆದಿದ್ದಾರೆ. ಅಲ್ಲಿನ ಸುಮಾರು 30ಕ್ಕೂ ಹೆಚ್ಚು ಹಿಂದೂ ಸಮುದಾಯದ ಮುಖಂಡ ಅಂಗಡಿಗಳನ್ನು ದೋಚಿಸಿದ್ದಾರೆ.

ಪ್ರಮುಖ ಸುದ್ದಿ

ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಮಾನವ ಸರಪಳಿ ಕಾರ್ಯಕ್ರಮ

## ಅಧಿಕಾರಿಗಳು ಕಾರ್ಯಕ್ರಮ ಯಶಸ್ವಿಗೆ ಸನ್ನದ್ದರಾಗಿ: ತಿಮ್ಮಪ್ಪ

» ಚಳ್ಳಕೆರೆ



ಸೆ.15 ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ-2024 ಪ್ರಜಾಪ್ರಭುತ್ವಕ್ಕಾಗಿ ಮಾನವ ಸರಪಳಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವ ನಿಟ್ಟಿನಲ್ಲಿ ತಾಲ್ಲೂಕು ಪಂಚಾಯಿತಿ ಕಾರ್ಯಾಲಯದಲ್ಲಿ ವಿವಿಧ ಇಲಾಖೆಯ ತಾಲ್ಲೂಕು ಮಟ್ಟದ ಅಧಿಕಾರಿಗಳು, ಪಿಡಿಒ, ಸಿಬ್ಬಂದಿ ವರ್ಗದ ಸಭೆಯನ್ನು ಆಯೋಜಿಸಿದ್ದು, ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಕೆ.ತಿಮ್ಮಪ್ಪ ಕಾರ್ಯಕ್ರಮ ಯಶಸ್ವಿಗೊಳಿಸುವ ನಿಟ್ಟಿನಲ್ಲಿ ಹಲವಾರು ಸಲಹೆ ಸೂಚನೆಗಳನ್ನು ನೀಡಿದರಲ್ಲದೆ, ಅಧಿಕಾರಿ ವರ್ಗ ಕಾರ್ಯಕ್ರಮದ ಯಶಸ್ವಿಗೆ ಹೆಚ್ಚು ಗಮನಹರಿಸಬೇಕೆಂದು ತಾಕೀತು ಮಾಡಿದರು.

ಚಿತ್ರದುರ್ಗ ಜಿಲ್ಲೆಯ ಮೊಳಕಾಲ್ಮೂರು, ಚಳ್ಳಕೆರೆ ಮತ್ತು ಹಿರಿಯೂರು ತಾಲ್ಲೂಕುಗಳಲ್ಲಿ ಮಾನವ ಸರಪಳಿ ಕಾರ್ಯಕ್ರಮ ನಡೆಯಲಿದ್ದು, ಬಳ್ಳಾರಿ ಜಿಲ್ಲೆಯಿಂದ ಚಿತ್ರದುರ್ಗ ಜಿಲ್ಲೆಗೆ ಸಂಪರ್ಕ ಪಡೆಯಲಿದೆ. ವಿಶೇಷವಾಗಿ ಬೀದರ್-ಚಾಮರಾಜನಗರ ತನಕ ಮಾನವ ಸರಪಳಿ ಕಾರ್ಯಕ್ರಮ ಆಯೋಜಿಸಲಾಗಿದೆ. ರಾಜ್ಯ ಸರ್ಕಾರ ಈ ಕಾರ್ಯಕ್ರಮದ ಬಗ್ಗೆ ವಿಶೇಷ ಆಸಕ್ತಿಯನ್ನು ವಹಿಸಿ ರಾಜ್ಯ, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಕಾರ್ಯಕ್ರಮದ ಹಿನ್ನೆಲೆಯಲ್ಲಿ ಆಯೋಜಿಸಬೇಕಾದ ರೂಪುರೇಷೆಗಳ ಬಗ್ಗೆ ಸ್ಪಷ್ಟ ಮಾಹಿತಿ ನೀಡಿದೆ.

ಯಾವುದೇ ಕಾರಣಕ್ಕೂ ಯಾವ ಅಧಿಕಾರಿಯೂ ಈ ಕೆಲಸದಿಂದ ಹೊರಗೆ ಉಳಿಯಬಾರದು. ಈಗಾಗಲೇ ಪೊಲೀಸ್ ಇಲಾಖೆ ಪ್ರತಿ ಕಿ.ಮೀಗೆ ಇಂತಿಷ್ಟು ಸಿಬ್ಬಂದಿಯನ್ನು ನಿಯೋಜಿಸಿದ್ದು, ಸರ್ಕಾರವೂ ಸಹ ತಾಲ್ಲೂಕು ಮಟ್ಟದ ಅಧಿಕಾರಿಗಳನ್ನು ಈ ಕಾರ್ಯಕ್ಕೆ ನಿಯೋಜಿಸಿದೆ. ವಿಶೇಷವಾಗಿ ಚಳ್ಳಕೆರೆ ತಾಲ್ಲೂಕಿನ ಎಲ್ಲಾ ಅಧಿಕಾರಿಗಳು, ಸಿಬ್ಬಂದಿ ವರ್ಗ, ಸಂಘ ಸಂಸ್ಥೆಯ ಪ್ರತಿನಿಧಿಗಳು ಪ್ರಜಾಪ್ರಭುತ್ವದ ಮಾನವ ಸರಪಳಿ ಅಂದೋಲನವನ್ನು ಯಶಸ್ವಿಗೊಳಿಸುವ ಮೂಲಕ ಪ್ರಜಾಪ್ರಭುತ್ವದ ರಕ್ಷಣೆಗೆ ತಮ್ಮ ಕೊಡುಗೆಯನ್ನು ನೀಡಬೇಕು. ಈ ನಿಟ್ಟಿನಲ್ಲಿ ನಗರ ಹಾಗೂ ಗ್ರಾಮೀಣ ಪ್ರದೇಶದಲ್ಲಿ ಹೆಚ್ಚು ಜಾಗೃತಿ ಮೂಡಿಸಿ ಎಂದರು.

ಕೈಗಾರಿಕೆ ಇಲಾಖೆಯ ಜಂಟಿ ನಿರ್ದೇಶಕ ಬಿ.ಆನಂದ ಮಾತನಾಡಿ, ಸರ್ಕಾರ ಹಲವಾರು ಪ್ರಮುಖ ಹಾಗೂ ಮಹತ್ವದ ಕಾರ್ಯಕ್ರಮದಲ್ಲಿ ಈ ಕಾರ್ಯಕ್ರಮವೂ ಒಂದಾಗಿದೆ. ಬೇರೆ, ಬೇರೆ ವಿಚಾರಗಳಿಗಾಗಿ ಪಾದಯಾತ್ರೆ, ಮಾನವ ಸರಪಳಿ ಕಾರ್ಯಕ್ರಮಗಳು ನಡೆಯುವುದು ಸ್ವಾಭಾವಿಕ. ಆದರೆ, ಇವುಗಳೆಲ್ಲವನ್ನೂ ಮೀರಿ ಪ್ರಜಾಪ್ರಭುತ್ವವನ್ನು ರಕ್ಷಿಸಬೇಕಾದ ಜವಾಬ್ದಾರಿ ಎಲ್ಲರಿಗೂ ಇದೆ. ಎಲ್ಲರೂ ಈ ಕಾರ್ಯದಲ್ಲಿ ಪಾಲ್ಗೊಂಡು ತಮ್ಮ ಅಳಿಲು ಸೇವೆಯನ್ನು ಸಲ್ಲಿಸಬೇಕಿದೆ. ವಿಶೇಷವಾಗಿ ಜಿಲ್ಲಾಧಿಕಾರಿಗಳು ಈಗಾಗಲೇ ಕಾರ್ಯಕ್ರಮದ ಯಶಸ್ವಿಹಿನ್ನೆಲೆಯಲ್ಲಿ ಜಿಲ್ಲಾಮಟ್ಟದಲ್ಲಿ ಸಭೆ ನಡೆಸಿ ಸೂಚನೆ ನೀಡಿದ್ದಾರೆ. ಅವುಗಳ ಪಾಲನೆಗೆ ನಾವೆಲ್ಲರೂ ಮುಂದಾಗಬೇಕು ಎಂದರು.

ಸಭೆಯಲ್ಲಿ ತಹಶೀಲ್ದಾರ್ ರೇಹಾನ್‌ಪಾಷ, ಇಒ ಎಚ್.ಶಶಿಧರ, ವೃತ್ತ ನಿರೀಕ್ಷಕ ರಾಜಫಕೃದ್ದೀನ್ ದೇಸಾಯಿ, ಸಂಪತ್‌ಕುಮಾರ್, ಸಂತೋಷ್ ಮುಂತಾದವರು ಇದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T